
ವಿಜಯಪುರ | ಸಂಪುಟ 02 | ಸಂಚಿಕೆ 94 | ಪುಟ 4 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಶನಿವಾರ, ಜೂನ್ 01, 2024



"ಭೀಮಾತೀರದ ಮರಳು ಅಕ್ರಮ ದಂಧೆ ಬಗ್ಗೆ ವರದಿ ಮಾಡಿದ ಪತ್ರಕರ್ತ ಗುಂಡು ಕುಲಕರ್ಣಿ ಅವರಿಗೆ ಸಿಂದಗಿಯ ಸಿಪಿಐ & ಪಿಎಸ್ಐ ಬೆದರಿಕೆ ಹಾಕುವ ಮೂಲಕ ಮಾಧ್ಯಮ ಸ್ವಾತಂತ್ರವನ್ನು ಹತ್ತಿಕ್ಕುವ ಪ್ರಯತ್ನ ಮಾಡಿರುವುದು ಖಂಡನೀಯ."

– ಶಿವಾನಂದ ತಗಡೂರು
ರಾಜ್ಯಾಧ್ಯಕ್ಷರು, ಕಾರ್ಯನಿರತ ಪತ್ರಕರ್ತರ ಸಂಘ

ಆರು ದಿನ ಪೊಲೀಸ್ ಕಸ್ಟಡಿಗೆ ನೀಡಿದ ಬೆಂಗಳೂರು ನ್ಯಾಯಾಲಯ । ಬೆಂಗಳೂರಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆ

# ಲೈಂಗಿಕ ದೌರ್ಜನ್ಯ ಪ್ರಕರಣ: ಸಂಸದ ಪ್ರಜ್ವಲ್ ರೇವಣ್ಣ ಬಂಧನ!

ಬೆಂಗಳೂರು: ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧಿತರಾಗಿರುವ ಹಾಸನ ಸಂಸದ, ಎನ್‌ಡಿಎ ಲೋಕಸಭಾ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಅವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ ಬಳಿಕ ಕೋರ್ಟ್‌ಗೆ ಹಾಜರುಪಡಿಸಲಾಗಿದ್ದು, ಆರೋಪಿಯನ್ನು ಆರು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ.

ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಬೆಂಗಳೂರು ನ್ಯಾಯಾಲಯ ಆರು ದಿನಗಳ ಪೊಲೀಸ್ ಕಸ್ಟಡಿಗೆ ನೀಡಿದೆ. ಲೈಂಗಿಕ ದೌರ್ಜನ್ಯ ಆರೋಪದ ಕುರಿತು ತನಿಖೆ ನಡೆಸುತ್ತಿರುವ ಎಸ್‌ಐಟಿ ತಂಡ ಹೊಳೆನರಸೀಪುರದಲ್ಲಿ ಅವರ ವಿರುದ್ಧ ದಾಖಲಾಗಿರುವ ಮೊದಲ ಎಫ್‌ಐಆರ್‌ನಲ್ಲಿ ಅವರನ್ನು ಕಸ್ಟಡಿಗೆ ಕೋರಿತ್ತು.

ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಬಂಧಿತರಾಗಿರುವ ಜೆಡಿಎಸ್ ಅಮಾನತುಗೊಂಡಿರುವ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ವೈದ್ಯಕೀಯ ಪರೀಕ್ಷೆಗಾಗಿ ಬೆಂಗಳೂರಿನ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಗೆ ಕರೆತರಲಾಗಿತ್ತು. ವೈದ್ಯಕೀಯ ಪರೀಕ್ಷೆಯ ಮುಕ್ತಾಯದ ನಂತರ, ಪ್ರಜ್ವಲ್ ಅವರನ್ನು ಸಿಟಿ ಸಿವಿಲ್ ನ್ಯಾಯಾಲಯಕ್ಕೆ ಕರೆದೊಯ್ಯಲಾಯಿತು, ಅಲ್ಲಿ ಅವರನ್ನು 42 ನೇ ಎಸಿಎಂಎಂ ನ್ಯಾಯಾಲಯದ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಯಿತು. ಅಲ್ಲಿ ಪ್ರಜ್ವಲ್ ಅವರನ್ನು ತಮ್ಮ ಕಸ್ಟಡಿಗೆ ಒಪ್ಪಿಸುವಂತೆ ಎಸ್‌ಐಟಿ ಅಧಿಕಾರಿಗಳು ನ್ಯಾಯಾಲಯಕ್ಕೆ ಮನವಿ ಮಾಡಿದ್ದರು. ಅಂತಿಮವಾಗಿ



ನ್ಯಾಯಾಧಿಶರು ಆರು ದಿನಗಳ ಕಾಲ ಎಸ್‌ಐಟಿ ವಶಕ್ಕೆ ನೀಡಿದ್ದಾರೆ.

ಹಾಸನ ಸಂಸದರನ್ನು ಎಸ್‌ಐಟಿ ಗುರುವಾರ ರಾತ್ರಿ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಬಂಧಿಸಿದೆ. ಮೈಸೂರಿನ ಕೆಆರ್ ನಗರದ ಮಹಿಳೆಯೊಬ್ಬಳ ಅಪಹರಣ ಪ್ರಕರಣದಲ್ಲಿ ಎಚ್‌ಡಿ ರೇವಣ್ಣ ಜಾಮೀನು ಪ್ರಶ್ನಿಸಿ ಎಸ್‌ಐಟಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಎಸ್‌ಐಟಿ ಪ್ರಕಾರ, ಈ ತನಿಖೆ ಮುಗಿಯುವವರೆಗೆ ರೇವಣ್ಣ ಕಸ್ಟಡಿಯಲ್ಲಿ ಮುಂದುವ-ರಿಯಬೇಕು. ಹೀಗಾಗಿ, ಜಾಮೀನು ರದ್ದುಗೊಳಿಸುವಂತೆ ಹೈಕೋರ್ಟ್‌ಗೆ ಮನವಿ ಮಾಡಿದೆ.

ಪ್ರಜ್ವಲ್ ಅವರು ಭಾಗಿಯಾಗಿದ್ದಾರೆ ಎನ್ನಲಾದ ನೂರಾರು ಅಶ್ಲೀಲ ವಿಡಿಯೋ ತುಣುಕುಗಳ ಪ್ರಸಾರದ ಮಧ್ಯೆ ಏಪ್ರಿಲ್ 26 ರಂದು ತಡರಾತ್ರಿ ದೇಶವನ್ನು ತೊರೆದಿದ್ದಾರೆ ಎಂದು ವರದಿಯಾಗಿತ್ತು. ಸೋಮವಾರ ವಿಡಿಯೋ ಸಂದೇಶವನ್ನು ಬಿಡುಗಡೆ ಮಾಡಿದ್ದ ಅವರು, ಮೇ 31 ರಂದು ವಿಶೇಷ ತನಿಖಾ ತಂಡ (ಎಸ್‌ಐಟಿ) ಮುಂದೆ ಹಾಜರಾಗುವುದಾಗಿ ಹೇಳಿದ್ದರು.

ಲೈಂಗಿಕ ಕಿರುಕುಳದ ಆರೋಪದ ನಡುವೆ ಕಳೆದ ತಿಂಗಳು ಜರ್ಮನಿಗೆ ಪಲಾಯನ ಮಾಡಿದ ಪ್ರಜ್ವಲ್ ರೇವಣ್ಣ ಅವರ ಪಾಸ್‌ಪೋರ್ಟ್ ಅನ್ನು ವಶಪಡಿಸಿಕೊಳ್ಳಲು ವಿದೇಶಾಂಗ ವ್ಯವಹಾರಗಳ ಸಚಿವಾಲಯವು (ಎಂಇಎ) ಮೇ 21 ರಂದು ವಿನಂತಿಯನ್ನು ಸ್ವೀಕ-ರಿಸಿದೆ ಎಂದು ವಿದೇಶಾಂಗ ಸಚಿವ ಎಸ್ ಜೈಶಂಕರ್ ಹೇಳಿದ್ದಾರೆ.

## ರಾಜ ನುಡಿ

ಸಮಯ ತೆಗೆದುಕೊಂಡು, ಮೌನವಾಗಿ ಬೆಳೆದು ನಿಂತ ಮರದ ಕೊಂಬೆಯನ್ನು ಕತ್ತರಿಸುವುದು ಸುಲಭ. ಅದರ ಮರು ಜೋಡಣೆ ಮಾತ್ರ ಭ್ರಾಂತಿ, ಬೆಳವಣಿಗೆ ಮೌನವಾಗಿರುತ್ತದೆ. ವಿನಾಶ ಮಾತ್ರ ಗದ್ದಲದಿಂದ ಕೂಡಿರುತ್ತದೆ. ಮನುಷ್ಯ ಸಂಬಂಧಗಳು ಹಾಗೆಯೇ ಅಲ್ಲವೇ!.

–ಡಾ. ರಾಜಶೇಖರ ನಾಗೂರ

## ಭವಾನಿ ರೇವಣ್ಣ ಜಾಮೀನು ಅರ್ಜಿ ವಜಾ :ಬಂಧನ ಸಾಧ್ಯತೆ

ಬೆಂಗಳೂರು: ಲೈಂಗಿಕ ದೌರ್ಜನ್ಯ ಪ್ರಕರಣದ ಸಂತ್ರಸ್ತ ಮಹಿಳೆಯ ಕಿಡ್ನಾಪ್ ಪ್ರಕರಣಕ್ಕೆ ಸಂಬಂಧಿಸಿ ಭವಾನಿ ರೇವಣ್ಣ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಕೋರ್ಟ್ ವಜಾ ಮಾಡಿದ್ದು, ಯಾವುದೇ ಸಂದರ್ಭದಲ್ಲಿ ಭವಾನಿ ರೇವಣ್ಣ ಬಂಧನದ ಸಾಧ್ಯತೆ ಇದೆ.

ಅಪಹರಣ ಪ್ರಕರಣದಲ್ಲಿ ಎಸ್‌ಐಟಿಗೆ ಭವಾನಿ ರೇವಣ್ಣನ ತನಿಖೆ ಅಗತ್ಯವಿದೆ. ಹೀಗಾಗಿ ಅವರನ್ನು ಕಸ್ಟಡಿಗೆ ನೀಡಬೇಕು, ಭವಾನಿ ಕಿಡ್ನಾಪ್ ನಲ್ಲಿ ಭಾಗಿಯಾಗಿದ್ದಾರೆ ಎಂಬುದಕ್ಕೆ ಸಾಕ್ಷಿಗಳಿವೆ. ದೂರುದಾರ ಹಾಗೂ ಆರೋಪಿ ಸತೀಶ್ ಬಾಬಣ್ಣ ಮಾತಾಡಿರುವ ಕಾಲ್ ರೆಕಾರ್ಡ್ ಇದೆ. ಈ ಕಾಲ್ ರೆಕಾರ್ಡ್‌ನಲ್ಲಿ ಭವಾನಿ ಯಾವ ರೀತಿ ಭಾಗಿಯಾಗಿದ್ದಾರೆ ಎಂಬುದಕ್ಕೆ ಸಾಕ್ಷಿ ಇದೆ. ಮೊಬೈಲ್‌ನ ಆಟೋ ರೆಕಾರ್ಡರ್‌ನಿಂದ ಕಾಲ್ ರೆಕಾರ್ಡ್ ಆಗಿದೆ ಎಂದು ಕೋರ್ಟ್ ಗಮನಕ್ಕೆ ತಂದಿದ್ದಾರೆ.



ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಪೊಲೀಸರು ಭವಾನಿ ಅವರಿಗೆ ತನಿಖೆಗೆ ಹಾಜರಾಗುವಂತೆ 15 ದಿನಗಳ ಹಿಂದೆ ನೋಟಿಸ್ ನೀಡಿದ್ದರು. ಈ ಹಿನ್ನೆಲೆ ಅವರು ನಿರೀಕ್ಷಣಾ ಜಾಮೀನಿಗಾಗಿ ಅರ್ಜಿ ಸಲ್ಲಿಸಿದ್ದರು. ಈ ಮಧ್ಯೆ ಶುಕ್ರವಾರ ಬೆಳಗ್ಗೆ ಎಸ್‌ಐಟಿ ಅಧಿಕಾರಿಗಳು ಭವಾನಿ ಅವರಿಗೆ ಎರಡನೇ ನೋಟಿಸ್ ನೀಡಿದ್ದರು. ಅವರು ಮನೆಯಲ್ಲಿ ಇಲ್ಲದ ಕಾರಣ ನೋಟಿಸ್ ಅಂಟಿಸಿ ಬಂದಿದ್ದರು. ಇದೀಗ ಕೋರ್ಟ್ ಅವರ ಜಾಮೀನು ಅರ್ಜಿಯನ್ನು ತಿರಸ್ಕರಿಸಿದೆ.

## ಪತ್ರಕರ್ತಗೆ ಬೆದರಿಕೆ ಹಾಕಿದ ಪೋಲಿಸರ ಮೇಲೆ ಕ್ರಮಕ್ಕೆ ಕಾನಿಪ ಆಗ್ರಹ




ಸಿಂದಗಿ: ಕಳೆದ ಕೆಲ ದಿನಗಳ ಹಿಂದೆ ಅಕ್ರಮ ಮರಳು ಸಾಗಾಟ ಕುರಿತು ಸಿಂದಗಿ ತಾಲೂಕು ವರದಿಗಾರ ಗುಂಡು ಕುಲಕರ್ಣಿ ವರದಿ ಮಾಡಿದ ಹಿನ್ನಲೆಯಲ್ಲಿ ಸಿಂದಗಿ ಸ್ಥಳೀಯ ಪೋಲಿಸ್ ಇಲಾಖೆ ಅಧಿಕಾ-ರಿಗಳು ವರದಿಗಾರನನ್ನು ಮಧ್ಯರಾತ್ರಿ ಅಪಹರಿಸಿ ಜೀವ ಬೆದರಿಕೆ ಹಾಕಿದ ಕುರಿತು ತಾಲೂಕು ದಂಡಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮತ್ತು ಸಿಎಂ ಅವರಿಗೆ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಪತ್ರಕರ್ತರು ಶುಕ್ರವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಾನಿಪ ತಾಲೂಕಾಧ್ಯಕ್ಷ ಆನಂದ ಶಾಬಾದಿ ಮಾತನಾಡಿ, ಗುಂಡು ಕುಲಕರ್ಣಿ ಅಕ್ರಮ ಮರಳು ಸಾಗಣೆ ಕುರಿತು ವರದಿ ಮಾಡಿದ್ದಕ್ಕಾಗಿ ಗುಂಡು ಕುಲಕರ್ಣಿ ಅವರನ್ನು ಪೊಲೀಸ್ ಇಲಾಖೆಯ ಅಧಿಕಾರಿಗಳು ಅಪಹರಿಸಿ ಹೊರವಲಯಕ್ಕೆ ಕರೆದೊಯ್ದು ಜೀವ ಬೆದರಕೆ ಹಾಕಿದ್ದಾರೆ ಅಲ್ಲದೇ ವರದಿ ಮಾಡದಂತೆ ಎಚ್ಚರಿಕೆ ನೀಡಿದ್ದಾರೆ. ನನಗೆ ಜೀವ ಭಯವಿದೆ ಎಂದು ಗುಂಡು ಕುಲಕರ್ಣಿ ಅವರು ನಮ್ಮ ಸಂಘಕ್ಕೆ ಒಂದು ಮನವಿ ಸಲ್ಲಿಸಿದ್ದಾರೆ. ಸಾರ್ವಜನಿಕರ ಹಿತಾಸಕ್ತಿ ಮೇರೆಗೆ ಅವರಿಗೆ ಸ್ಪಂದಿಸಿ ಸುದ್ದಿ ಮಾಡುವುದು ಪತ್ರಕರ್ತರ ಕರ್ತವ್ಯ. ಮಾಡಿರುವ ಸುದ್ದಿಯನ್ನು ನೋಡಿದ ಮೇಲಾಧಿಕಾ-ರಿಗಳು ಅದನ್ನು ನೋಡಿಕೊಂಡು ಮುಂದೆ ಈ ರೀತಿಯಾಗದಂತೆ ನೋಡಿಕೊಳ್ಳಬೇಕು. ಅದನ್ನು ಬಿಟ್ಟು ಸುದ್ದಿ ಮಾಡಿದ ಪತ್ರಕರ್ತನಿಗೆ ಪ್ರಾಣ ಭಯ ಹುಟ್ಟಿಸುವಂತಹ ಕಾರ್ಯ ಯಾವುದೇ ಇಲಾಖೆಯಿಂದ ಆಗಬಾರದು. ಇದರ ಕುರಿತಾಗಿ ಈಗಾಗಲೇ ಜಿಲ್ಲಾಧಿಕಾರಿ, ಎಸ್ಪಿ ಅವರಿಗೆ ಇದರ ಬಗ್ಗೆ ದೂರು ಸಲ್ಲಿಸಿದಾಗ ಅವರು ತಂಡ ರಚನೆ ಮಾಡಿ ಪರಿಶೀಲಿಸಿ ತನಿಖೆ ಮಾಡಲಾಗುವುದು ಎಂದು ಹೇಳಿದ್ದಾರೆ. ಇದರಲ್ಲಿ ತಪ್ಪು ಯಾರದೆಂದು ಕುಲಂಕುಶವಾಗಿ ಪರಿಶೀಲನೆ ಮತ್ತು ತನಿಖೆ ಮಾಡಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಬೇಕು ಎಂದರು.

ಈ ವೇಳೆ ಮನವಿ ಸ್ವೀಕ-ರಿಸಿದ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ ಮಾತನಾಡಿ, ಈಗಾಗಲೇ ಈ ವಿಚಾರದ ಕುರಿತು ನಾನು ಮತ್ತು ಇಂಡಿ ಉಪವಿಭಾಗ ಅಧಿಕಾರಿಗಳು ಎಚ್ಚರಿಕೆ ನೀಡಿದ್ದೇವೆ. ತಂಡ ರಚನೆ ಮಾಡಿ ತಪ್ಪಿತಸ್ಥರು ಯಾರು ಎಂದು ಪರಿಶೀಲಿಸಿ ತನಿಖೆ ಮಾಡಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

ಈ ವೇಳೆ ಪತ್ರಕರ್ತರಾದ ಮಲ್ಲಿಕಾರ್ಜುನ ಅಲ್ಲಾಪೂರ, ರಮೇಶ ಪೂಜಾರ, ಭೀಮು ಕೆಂಭಾವಿ, ಭೋಜರಾಜ ದೇಸಾಯಿ, ವಿಜಯ ಪತ್ತಾರ, ರವಿಚಂದ್ರ ಮಲ್ಲೇದ, ಅಂಬರೀಷ ಸುಣಗಾರ, ಶಿವಾನಂದ ಆಲಮೇಲ, ಸಲಿಂ ಮರ್ತೂರ, ನವೀನ ಶೆಳ್ಳಗಿ, ಮಹಾಂತೇಶ ನೂಲಾನವರ, ಶಾಂತವೀರ ಹಿರೇಮಠ, ಸಂಗಮೇಶ ಮನ್ನಿಕಟ್ಟಿ, ಖಾಜಾಅಮೀನ ಮಕಾಂದಾರ, ಇಸ್ಮಾಯಿಲ್ ಶೇಖ, ರಶೀದ ಕುಮಸಗಿ, ಅಬ್ದುಲಗಪುರ ಮುಜಾವರ, ವಸೀಮ್ ಗೋಗಿ ಸೇರಿದಂತೆ ಅನೇಕ-ರಿದ್ದರು.

## ವಚನ ಚಿಂತನ 390

*ಶಿವ' ಎಂಬ ವಚನವ ಬಿಡದಿರಿ, ಮಡದಿಯರ ಒಲುಮೆಯ ನಚ್ಚದಿರಿ, ದರ್ಪಣದ ಒಪ್ಪವ ತಪ್ಪದಿರಿ, ವಾಯುವ ಕಡೆಗಡೆಗೆ ತಿದ್ದದಿರಿ,*

*ಹಿಡಿವಡೆ ದೃಢವಾಗಿ ಹಿಡಿಯಿರೆಲವೊ, ಗುಹೇಶ್ವರ ಸಿಕ್ಕಿದ ಅಲ್ಲಮಂಗೆ.*

ಇಷ್ಟಲಿಂಗದ ದೃಷ್ಟಿಯೋಗದಿಂದ ಉಂಟಾಗುವ ಪರಿಣಾಮವನ್ನು ಅಲ್ಲಮಪ್ರಭುಗಳು ಅನುಭವಿಸಿ ಬೆರಗಾಗಿದ್ದಾರೆ.ಬಸವಣ್ಣನವರ ಸಂಪರ್ಕ ಬಯಸಿ ಬಳ್ಳಿಗಾವಿಯಿಂದಿ ಕಲ್ಯಾಣಕ್ಕೆ ಬಂದ ಮೇಲೆ ಶರಣರ ಸಂಗದಲ್ಲಿ ತಾವು ಅನುಭವಿಸಿದ ಅನುಭಾವವನ್ನು ತಮ್ಮ ಒಂದು ವಚನದಲ್ಲಿ ಹೀಗೆ ವಿವರಿಸಿದ್ದಾರೆ,"ಅರಸುವ ಬಳ್ಳಿ ಕಾಲ ಸುತ್ತಿತ್ತೆಂಬಂತೆ, ಬಯಸುವ ಬಯಕೆ ಕೈಸಾ-ರಿದಂತೆ, ಬಡವ ನಿಧಾನವನೆಡಹಿ ಕಂಡಂತೆ, ನಾನರಸುತ್ತಲರಸುತ್ತ ಬಂದು ಭಾವಕ್ಕಗಮ್ಯವಾದ ಮೂರ್ತಿಯ ಕಂಡೆ ನೋಡಾ. ಎನ್ನ ಅರಿವಿನ ಹರುಹ ಕಂಡೆ ನೋಡಾ. ಎನ್ನ ಒಳಹೊರಗೆ ಎಡೆದೆರಹಿಲ್ಲದೆ ಥಳಥಳಿಸಿ ಬೆಳಗಿ ಹೊಳೆವುತಿಪ್ಪ ಅಖಂಡಜ್ಯೋತಿಯ ಕಂಡೆ ನೋಡಾ ! ಕರುಹಳಿದ ಕರಸ್ಥಲದ ನಿಬ್ಬೆರಗಿನ ನೋಟದ ಎನ್ನ ಪರಮಗುರುವ ಕಂಡು ಬದುಕಿದೆನು ಕಾಣಾ ಗುಹೇಶ್ವರಾ" ಹೀಗೆ ಕರದಲ್ಲಿಕಂಡ ಮಹಾಲಿಂಗದ ಅಖಂಡ ಜ್ಯೋತಿಯ ಬೆಳಗನ್ನು ಸರ್ವರು ಕಾಣಲಿ ಎಂಬ ಕಳಕಳಿಯಿಂದ ಇಷ್ಟಲಿಂಗ ಪೂಜೆಯ ವಿಧಾನವನ್ನು ಈ ವಚನದಲ್ಲಿ ವಿವರಿಸಿದ್ದಾರೆ. "ಶಿವ ಎಂಬ ವಚನವು ಬಿಡದಿರಿ" ಎನ್ನುವಲ್ಲಿ ಇಷ್ಟಲಿಂಗ ಪೂಜಾ ನಿರತನಾದ ಸಾಧಕನು ಮನದಲ್ಲಿ ಪಠಿಸುವ ಓಂ ನಮಃ ಶಿವಾಯ ಎಂಬ ಮಂತ್ರವನ್ನು ನಿಲ್ಲಿಸದೆ ಲಿಂಗ ನಿರೀಕ್ಷೆ ಮಾಡಲು ಸೂಚಿಸಿದ್ದಾರೆ. "ಮಡದಿಯರ ಒಲುಮೆಯ ನಚ್ಚದಿರಿ," ಎನ್ನುವಲ್ಲಿ ಶರಣ ಸತಿ ಲಿಂಗಪತಿ ಭಾವದಲ್ಲಿರುವ ಶರಣನು ಅಂಗದ ಇಚ್ಛೆಗೆ ಹೆಚ್ಚು ಗಮನಹರಿಸದಿರಿ ಎಂದಿದ್ದಾರೆ."ವಾಯುವ ಕಡೆಗಡೆಗೆ ತಿದ್ದದಿರಿ" ಎಂಬುದು ಉಸಿರಿನ ಮೇಲೆ ನಿಯಂತ್ರಣವಿಡುತ್ತ ವಿವಿಧ ಚಕ್ರಗಳ ಜಾಗೃತಿಗೊಳಿಸಿ ಆಜ್ಞಾಚಕ್ರಕ್ಕೆ ಶಕ್ತಿ ಸಂಚಲನ ಗೊಳಿಸುವ ಪ್ರಕ್ರಿಯೆಮುಂದು ವರೆಸಲು ಹೇಳಿದ್ದಾರೆ. ಈ ಪ್ರಕ್ರಿಯೆಯನ್ನು ಮಧ್ಯದಲ್ಲಿ ನಿಲ್ಲಿಸದಿರುವಂತೆ" ಹಿಡಿವಡೆ ದೃಢವಾಗಿ ಹಿಡಿಯಿರೆಲವೊ"ಎನ್ನುತ್ತಾ ಕುಂಡಲಿ ನಿ ಶಕ್ತಿ ಜಾಗೃತಿ ಮೂಡಿಸುವ ಪ್ರಕ್ರಿಯೆಯಲ್ಲಿ ಅವರು ಇಷ್ಟಲಿಂಗದಲ್ಲಿಯೇ ಮಹಾಲಿಂಗದ ದೃಷ್ಟವನ್ನು ಅನುಭವಿಸಿ ಸಂಭ್ರಮಿಸಿ ಹೊರಹೊಮ್ಮಿದ ಪದವೇ"ಗುಹೇಶ್ವರ ಸಿಕ್ಕಿದ ಅಲ್ಲಮಂಗೆ"– ಎಂದಿರುವುದು ಇದು ಅಲ್ಲಮಪ್ರಭು ಗಳಿಗೆ ಮಹಾಲಿಂಗ ದರ್ಶನವಾದ ಬಗ್ಗೆ ಸಾಕ್ಷಿ ನೀಡುವ ವಚನವಿದು. ಶರಣರ ಅನೇಕ ವಚನಗಳ ಲ್ಲಿ ಅನುಭಾವ ಪಡೆಯುವ ಹಂತಗಳನ್ನು ತಿಳಿಸಿದ್ದಾರೆ.ಅನುಸರಿಸಬೇಕಾಗಿದೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ವಿಜಯಪುರದಲ್ಲಿ ನಡೆದ ಭಾರತೀಯ ಜನತಾ ಪಕ್ಷದ ಅವಲೋಕನ ಸಭೆ

# ನಾನು ಗೆಲುವು ಸಾಧಿಸುವುದು ಶತಸಿದ್ಧ :ಸಂಸದ ಜಿಗಜಿಣಗಿ

**ಉದಯರಶ್ಮಿ ನ್ಯೂಸ್**

ವಿಜಯಪುರ:'ನನಗೆ ಸೋಲು ಗೆಲುವು ಮುಖ್ಯವಲ್ಲ, ನನ್ನ ಕಾರ್ಯಕರ್ತ ಬಂಧುಗಳ ಸ್ಫೂರ್ತಿ ಸದಾ ನನ್ನ ಜೊತೆಗಿರುವುದೇ ನನ್ನ ಆಸ್ತಿ ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ವಿಜಯಪುರದ ಗುರುದತ್ತ ಮಂಗಲ ಕಾರ್ಯಾಲಯದಲ್ಲಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನಡೆದ ಭಾರತೀಯ ಜನತಾ ಪಕ್ಷದ ಅವಲೋಕನ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದಲಿತನಾದ ನಾನು ಈ ಮಟ್ಟಕ್ಕೆ ಬೆಳೆಯಲು ಕಾರ್ಯಕರ್ತ ಬಂಧುಗಳ ಅನುಗ್ರಹವೇ ಕಾರಣ, ರಾಜಕಾರಣದಲ್ಲಿ ಜಾತಿ ಎಂಬುದು ಮುಖ್ಯವಲ್ಲ, ಕೇವಲ ಒಂದೇ ಸಮಾಜದ ಬೆಂಬಲದಿಂದ ರಾಜಕಾರಣದಲ್ಲಿ ಬೆಳೆಯಲು ಸಾಧ್ಯವಿಲ್ಲ, ಉತ್ತಮ ನಾಯಕನಾಗಿ ಬೆಳೆದು ಬರಲು ಎಲ್ಲ ಸಮಾಜಗಳ ಆಶೀರ್ವಾದ, ಬೆಂಬಲವೇ ಕಾರಣ ಎಂದರು.

ನನ್ನ ಅನುಭವ ಚುನಾವಣೆಗಳಲ್ಲಿ ಪ್ರಸಕ್ತ ಚುನಾವಣೆ ಅತ್ಯಂತ ಮಹತ್ವದ್ದು, ಸಣ್ಣ ಪುಟ್ಟ ಗೊಂದಲಗಳು ಸಹ ಇಲ್ಲದೇ ಅತ್ಯಂತ ಸುಸೂತ್ರವಾಗಿ ನಡೆದ ಚುನಾವಣಾ ಇದಾಗಿದೆ, ಕಾರ್ಯಕರ್ತರ, ಮುಖಂಡರ ಶ್ರಮಕ್ಕೆ ನಾನು ಬೆಲೆ ಕಟ್ಟಲು ಸಾಧ್ಯವಿಲ್ಲ, ಈ ಋಣವನ್ನು ನಾನು ಜೀವನದಲ್ಲಿ ತೀರಿಸಲು ಸಾಧ್ಯವಿಲ್ಲ ಎಂದು ಜಿಗಜಿಣಗಿ ಹೇಳಿದರು. ಈ ಚುನಾವಣೆಯಲ್ಲಿ ಕಾರ್ಯಕರ್ತರ ಶ್ರಮದಿಂದ ನಾನು ಗೆಲುವು ಸಾಧಿಸುವುದು ಶತಸಿದ್ಧ, ನನ್ನ ಕಾರ್ಯಕರ್ತ ಬಂಧುಗಳು ಆ ರೀತಿ ನನ್ನ ಪರವಾಗಿ ಕೆಲಸ ಮಾಡಿದ್ದಾರೆ ಎಂದರು.

ರಾಜ್ಯದಲ್ಲಿರುವ ಕೆಟ್ಟ ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆ ಆಲಿಸುತ್ತಿಲ್ಲ, ನಿಮ್ಮ ಸಮಸ್ಯೆ ಏನು ಎಂಬ ಸೌಜನ್ಯದಿಂದ ಕೇಳುತ್ತಿಲ್ಲ, ಈ ಹಿಂದೆ ನಮ್ಮ ಸರ್ಕಾರದ ಅವಧಿಯಲ್ಲಿಯೂ ಬರಗಾಲ ಪರಿಸ್ಥಿತಿ ಇತ್ತು, ಆದರೆ ಬಿ.ಎಸ್. ಯಡಿಯೂರಪ್ಪ ಅವರು ರೈತರಿಗೆ ಅಭಯ ನೀಡಿ ವೈಜ್ಞಾನಿಕವಾಗಿ ಪರಿಹಾರ ಹಣ ನೀಡಿದರು, ಆದರೆ ಈ ಬದ್ಧತೆ ಈ ಕಾಂಗ್ರೆಸ್ ಸರ್ಕಾರಕ್ಕೆ ಇಲ್ಲ ಎಂದು ವಾಗ್ದಾಳಿ ನಡೆಸಿದರು.




ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್. ಪಾಟೀಲ ಕುಚಬಾಳ ಮಾತನಾಡಿ, ಬಿಜೆಪಿ ಕಾರ್ಯಕರ್ತರ ಸಮರ್ಪಣಾ ಮನೋಭಾವದ ಶ್ರಮ ಹಾಗೂ ಅವಿರತ ಓಡಾಟದ ಫಲವಾಗಿ ವಿಜಯಪುರ ಜಿಲ್ಲೆಯಲ್ಲಿ ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ 1 ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸುವುದು ಶತಸಿದ್ಧ ಎಂದರು. ಕಾರ್ಯಕರ್ತ ಬಂಧುಗಳು ಚುನಾವಣೆ ಸಂದರ್ಭದಲ್ಲಿ ಅತ್ಯಂತ ಉತ್ಸಾಹದಿಂದ ಮೋದಿ ಸರ್ಕಾರದ ಸಾಧನೆ ಹಾಗೂ ಸಂಸದ ಜಿಗಜಿಣಗಿ ಅವರ ಸಾಧನೆಗಳನ್ನು ಮನೆ-ಮನೆಗೆ ತಿಳಿಸುವ ಮೂಲಕ ಅತ್ಯಂತ ಮಹತ್ವದ ಕಾರ್ಯ ನಿಭಾಯಿಸಿದರು ಎಂದರು. ಈಗ ಜಿಲ್ಲಾ ಪಂಚಾಯತ ಸೇರಿದಂತೆ ಅನೇಕ ಚುನಾವಣೆಗಳು ಎದುರಾಗಬಹುದು, ಆದರೆ ಯಾವ ಸಮಯದಲ್ಲಿಯೂ ಚುನಾವಣೆ ಬಂದರೂ ಸಮರ್ಪಣಾ ಮನೋಭಾವದಿಂದ ದುಡಿಯುವ ಕಾರ್ಯಕರ್ತರ ದೊಡ್ಡ ಪಡೆಯೇ ಬಿಜೆಪಿಯ ದೊಡ್ಡ ಆಸ್ತಿ ಎಂದರು. ಪ್ರಸ್ತುತ ರಾಜ್ಯ ಸರ್ಕಾರ ಒಂದು ರೀತಿ ಅನಿಷ್ಟ ಸರ್ಕಾರ, ಮಾರಕ ಸರ್ಕಾರವಾಗಿದೆ, ಬರ ಪರಿಸ್ಥಿತಿಯಲ್ಲಿ ರೈತರಿಗೆ ಅಭಯ ನೀಡಬೇಕಾದ ಸರ್ಕಾರ ಬೀಜ-ರಸಗೊಬ್ಬರ ದರವನ್ನು ಏರಿಕೆ ಮಾಡಿ ಬರದ ಬರೆಯ ಗಾಯದ ಮೇಲೆ ಮತ್ತೊಂದು ಬರೆ ಎಳೆಯುವ ಮೂಲಕ ರೈತ ವಿರೋಧಿ ನೀತಿ ಅನುಸರಿಸುತ್ತಿದೆ, ಕಾನೂನು-ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿದೆ ಎಂದರು.

ಮಾಜಿ ಶಾಸಕರಾದ ಸೋಮನಗೌಡ ಪಾಟೀಲ ಸಾಸನೂರ, ರಮೇಶ ಭೂಸನೂರ, ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ, ಕರ್ನಾಟಕ ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಚಂದ್ರಶೇಖರ ಕವಟಗಿ, ಕರ್ನಾಟಕ ಸಾವಯವ ಬೀಜ ಪ್ರಮಾಣನ ಸಂಸ್ಥೆ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ, ಬಿಜೆಪಿ ಸಂಘಟನಾ ಮಹಾಮಂತ್ರಿ ಪ್ರಕಾಶ ಅಕ್ಕಲಕೋಟ, ಕಾಸುಗೌಡ ಬಿರಾದಾರ, ನಗರ ಮಂಡಲ ಅಧ್ಯಕ್ಷ ಶಂಕರ್ ಹೂಗಾರ, ಜಿಲ್ಲೆ ಪ್ರಧಾನ ಕಾರ್ಯದರ್ಶಿಗಳಾದ ಸಾಬು ಮಾಶಾಳ, ಮಲ್ಲನಗೌಡ ಪಾಟೀಲ, ಈರಣ್ಣ ರಾವೂರ, ಮಹಿಳಾ ಮೋರ್ಚಾ ಅಧ್ಯಕ್ಷರಾದ ಸಪ್ನಾ ಕಣ್ಮುಚ್ಚಿನಾಳ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು, ಜಿಲ್ಲೆಯ ಪದಾಧಿಕಾರಿಗಳು, ಮಹಿಳಾ ಮೋರ್ಚ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು

## ಭೂಮಾಫಿಯಾ ಪ್ರಕರಣದ ತನಿಖೆ ಸಿ.ಓ.ಡಿಗೆ ವಹಿಸುವಂತೆ ಮುಖ್ಯಮಂತ್ರಿಗಳಿಗೆ ಲಿಖಿತ ಮನವಿ

# ಭೂಮಾಫಿಯಾ ಮಟ್ಟ ಹಾಕಲು ಮಾಜಿ ಸಚಿವ ಅಪ್ಪು ಪಟ್ಟಣಶೆಟ್ಟಿ ಆಗ್ರಹ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರ ಮತ್ತು ಜಿಲ್ಲೆಯಲ್ಲಿ ನಕಲಿ ಭೂಧಾಖಲೆ ಸೃಷ್ಟಿಸಿ ಜನರನ್ನು ವಂಚಿಸುತ್ತಿರುವ ಭೂಮಾಫಿಯಾ ಮಟ್ಟ ಹಾಕಲು ಈ ಪ್ರಕರಣದ ಸಮಗ್ರ ತನಿಖೆಯನ್ನು ಹಾಕಲು ಸಿ.ಓ.ಡಿಗೆ ವಹಿಸುವಂತೆ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಅವರು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಲಿಖಿತ ಮನವಿ ಸಲ್ಲಿಸಿದರು.

ಜಿಲ್ಲೆಯಲ್ಲಿ ಭೂ ಅಕ್ರಮಗಳ ಕುರಿತು ಮುಖ್ಯಮಂತ್ರಿಗಳಿಗೆ ಸುದೀರ್ಘವಾಗಿ ವಿವರಿಸಿದರು.

ವಿಜಯಪುರ ನಗರ ಮತ್ತು ಜಿಲ್ಲೆಯಲ್ಲಿ ಹಲವಾರು ವರ್ಷಗಳಿಂದ ಭೂದಾಖಲೆ ಸೃಷ್ಟಿಸಿ ಜಿಲ್ಲೆಯಲ್ಲಿ ಭೂಮಿ ಮತ್ತು ನಿವೇಶನ ಮಾರಾಟ ಮಾಡಿರುವ ನೂರಾರು ಪ್ರಕರಣಗಳು ನಡೆದಿದ್ದು ಕೆಲವೊಂದು ಪ್ರಕರಣಗಳು ಮಾತ್ರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದು ಇನ್ನೂ ಹಲವಾರು ಪ್ರಕರಣಗಳು ಇತ್ಯರ್ಥವಾಗದೆ ಉಳಿದಿವೆ, ಇಂತಹ ಪ್ರಕರಣಗಳಿಗೆ ನೂರಾರು ಜನ ತಮ್ಮ ಜಮೀನು ಮತ್ತು ನಿವೇಶನಗಳು ಕಳೆದುಕೊಂಡಿದ್ದಾರೆ, ಖೋಟ್ಟಿ ದಾಖಲೆ ಸೃಷ್ಟಿಸಿ ಮಾರಾಟ ಮಾಡಿರುವ ಪ್ರಕರಣಗಳು ನನ್ನ ಗಮನಕ್ಕೆ ನಾನು ಹಲವಾರು ಬಾರಿ ಪತ್ರಿಕಾಗೋಷ್ಠಿ ಮುಖಾಂತರ ಹಾಗೂ ನಾನು ಪ್ರತ್ಯಕ್ಷವಾಗಿ ಹಿಂದಿನ ಸರ್ಕಾರದ ಗಮನಕ್ಕೂ ತಂದರೂ ಕೂಡಾ ಯಾವುದೇ ತಪ್ಪಿತಸ್ಥರ ವಿರುದ್ಧ ಯಾವುದೇ ಕ್ರಮ ಆಗಿಲ್ಲ ಎಂದರು.

ಈ ಜಾಲ ವ್ಯವಸ್ಥಿತವಾಗಿ



ವ್ಯಾಪಿಸಿರುವುದರಿಂದ ಸಿ.ಓ.ಡಿ ತನಿಖೆಗೆ ವಹಿಸಬೇಕೆಂದು ಮನವಿ ಮಾಡಿದರು. ಈ ಪ್ರಕರಣದಲ್ಲಿ ಭೂಮಿ ಹಾಗೂ ನಿವೇಶನಗಳನ್ನು ಕಳೆದುಕೊಂಡವರಿಗೆ ನ್ಯಾಯ ಒದಗಿಸಬೇಕು, ತಪ್ಪಿತಸ್ಥರು ಯಾರೇ ಇದ್ದರೂ ಅವರ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ ಕೈಗೊಂಡು ಮೂಲ ಮಾಲಿಕರಿಗೆ ಅವರ ಜಮೀನು ಹಾಗೂ ನಿವೇಶನಗಳನ್ನು ಹಿಂದಿರುಗಿಸಬೇಕಾಗಿ ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ಜಗದೀಶ ಮುಚ್ಚಂಡಿ ಪಾಲ್ಗೊಂಡಿದ್ದರು.

# ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲಿಸಿ :ಎಸಿ ಬೀಡಿಕರ

**ಉದಯರಶ್ಮಿ ನ್ಯೂಸ್**



ಬಬಲೇಶ್ವರ: ಮಕ್ಕಳನ್ನು ಸರಕಾರಿ ಶಾಲೆಗೆ ದಾಖಲಿಸಿ ಮಕ್ಕಳಿಗೆ ಸೀಗುವ ಸರ್ಕಾರಿ ಸೌಲಭ್ಯಗಳನ್ನು ಪಡೆಯಬೇಕು ಎಂದು ವಿಜಯಪುರ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಹೇಳಿದರು.

ಬಬಲೇಶ್ವರ ಪಟ್ಟಣದ ಸರ್ಕಾರಿ ಎಂಪಿಎಸ್ ಶಾಲೆಯಲ್ಲಿ ಶುಕ್ರವಾರ ನಡೆದ ಶಾಲಾ ಪ್ರಾರಂಭೋತ್ಸವನ್ನು ಡೋಲು ಬಡೆಯುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ದೇಶ ಅಭಿವೃದ್ಧಿ ಹೊಂದಲಿ, ಮಕ್ಕಳ ಭವಿಷ್ಯ ಉಜ್ವಲವಾಗಲಿ ಎಂದು ಶುಭ ಹಾರೈಸಿದರು.

ಸಾಂಕೇತಿಕವಾಗಿ ಎಲ್ಲ ಮಕ್ಕಳಿಗೆ ಫಲ ಪುಷ್ಪ, ಪಠ್ಯ ಪುಸ್ತಕ, ಸಮವಸ್ತ್ರಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣವಲಯದ ಬಿಇಓ ಪ್ರಮೋಧಿನಿ ಬಳೋಲಮಟ್ಟಿ, ಎಸ್ಡಿಎಂಸಿ ಅಧ್ಯಕ್ಷ ಶ್ರೀಶೈಲ ಮಂಗಳವೆಡೆ, ಮುಖ್ಯೋಪಾಧ್ಯಾಯ ಎಚ್.ವಿ.ಮಾಲಗಾರ, ಅಶೋಕ ಬೂದಿಹಾಳ, ಇಸಿಓ ಪ್ರಭು ಬಿರಾದಾರ, ಬಿಆರ್ಪಿ ಕುಲಕರ್ಣಿ, ವಿಜಯಲಕ್ಷ್ಮಿ ಪಾಟೀಲ ಇದ್ದರು.

ಸಿಹಿ ತಿನ್ನಿಸಿ ಮಕ್ಕಳಿಗೆ ಸ್ವಾಗತ: ತಿಕೋಟಾ ಪಟ್ಟಣದ ಸರ್ಕಾರಿ ಕನ್ನಡ ಗಂಡು ಹಾಗೂ ಹೆಣ್ಣು ಮಕ್ಕಳ ಶಾಲೆಯಲ್ಲಿ ಮಕ್ಕಳಿಗೆ ಸಿಹಿ ತಿನ್ನಿಸುವ ಮೂಲಕ ಶಿಕ್ಷಣ ಸಂಯೋಜಕ ರವೀಂದ್ರ ಚಿಕ್ಕಮಠ ಹಾಗೂ ಜಿ.ಟಿ.ಕಾಗವಾಡ ಶಾಲಾ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಬೇಕು ಎಂದರು.

ಪಟ್ಟಣದ ಪ್ರಮುಖ ಬೀದಿ ಹಾಗೂ ವೃತ್ತಗಳಲ್ಲಿ ಟ್ರ್ಯಾಕ್ಟರ್ ಮೂಲಕ ದಾಖಲಾತಿ ಆಂದೋಲನ ಮಾಡಿದರು. ಶಾಲೆಯು ತಳಿರು ತೋರಣಗಳಿಂದ ಸಿಂಗಾರಗೊಂಡು ಮಕ್ಕಳನ್ನು ಶಾಲಾ ವಾತಾವರಣ ಆಕರ್ಷಿಸಿತು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯರಾದ ವೈ.ಬಿ.ವಾಲಿಕಾರ, ವಿ.ಎಂ.ಸವನಳ್ಳಿ, ಸಿಆರ್ಪಿ ಸುಜಾತಾ ಬಾಗಲಕೋಟ, ಎಸ್ಡಿಎಂಸಿ ಅಧ್ಯಕ್ಷರು, ಸದಸ್ಯರು ಹಾಗೂ ಶಿಕ್ಷಕರು ಇದ್ದರು.

## 2024-25 ನೇ ಸಾಲಿನ ದಾಖಲಾತಿ ಆಂದೋಲನ ಹಾಗೂ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ

# ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿದರೆ ಬದುಕು ಅಭಿವೃದ್ಧಿ :ರಿಷಿ ಆನಂದ

**ಉದಯರಶ್ಮಿ ನ್ಯೂಸ್**



ವಿಜಯಪುರ: ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿದರೆ ನಮ್ಮ ಬದುಕು ಅಭಿವೃದ್ಧಿಯಾಗುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಹೇಳಿದರು.

ಜಿಲ್ಲಾ ಪಂಚಾಯತ ವಿಜಯಪುರ, ಶಾಲಾ ಶಿಕ್ಷಣ ಇಲಾಖೆ ವಿಜಯಪುರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ನಗರ ವಲಯ ವಿಜಯಪುರ ಹಾಗೂ ಕೆ. ಪಿ. ಎಸ್. ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು(ಪ್ರೌಢ ಶಾಲಾ ವಿಭಾಗ) ಗಾಂಧಿ ವೃತ್ತ ವಿಜಯಪುರ ಇವರ ಸಹಯೋಗದಲ್ಲಿ ಗಾಂಧಿ ಚೌಕ್‌ನ ಕೆ. ಪಿ. ಎಸ್. ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು(ಪ್ರೌಢ ಶಾಲಾ ವಿಭಾಗ)ನಲ್ಲಿ ಶುಕ್ರವಾರ ನಡೆದ 2024-25 ನೇ ಸಾಲಿನ ದಾಖಲಾತಿ ಆಂದೋಲನ ಹಾಗೂ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಎಲ್ಲ ವಿದ್ಯಾರ್ಥಿಗಳು ಪ್ರತಿ ವಿಷಯದಲ್ಲಿಯೂ ಆಸಕ್ತಿ ವಹಿಸಿ ಅಭ್ಯಾಸ ಮಾಡಬೇಕು. ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಉಚಿತವಾಗಿ ಪುಸ್ತಕಗಳು, ಸಮವಸ್ತ್ರಗಳನ್ನು ವಿತರಿಸಲಾಗುತ್ತದೆ. ಅದನ್ನು ಉಪಯೋಗಿಸಿಕೊಂಡು ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು. ವಿದ್ಯಾರ್ಥಿಗಳ ಜೀವನದಲ್ಲಿ ಮಾನಸಿಕ ಹಾಗೂ ಸಾಮಾಜಿಕ ಅಭಿವೃದ್ಧಿ ಬಹಳ ಮುಖ್ಯವಾಗಿರುತ್ತದೆ. ಅದಕ್ಕೆ ಪೂರಕವಾದ ವಾತಾವರಣವನ್ನು ಶಾಲೆಗಳಲ್ಲಿ ಒದಗಿಸಲಾಗುತ್ತದೆ. ಜೊತೆಗೆ ಓದಿನೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಹ ತೊಡಗಿಸಿಕೊಳ್ಳಬೇಕು ಎಂದರು.

ಪ್ರಸ್ತುತ ಸಾಲಿನಲ್ಲಿ ನಮ್ಮ ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶವು ಬಹಳ ಉತ್ತಮವಾಗಿ-ತ್ತು. ಅದೇರೀತಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಇನ್ನೂ ಹೆಚ್ಚಿನ ಫಲಿತಾಂಶಕ್ಕಾಗಿ ಶ್ರಮಿಸಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅಲ್ಲದೆ ಮಕ್ಕಳಿಗೆ ದೈಹಿಕವಾಗಿ ಸದೃಢವಾಗಿರಲು ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಭಾಗಿಯಾಗಲು ಕರೆ ನೀಡಿದರು. ಉತ್ತಮ ಸಾಧನೆಗೆ ಶಿಕ್ಷಣ ಇಲಾಖೆಗೆ ಸಂಪೂರ್ಣ ಸಹಕಾರ ನೀಡುವದಾಗಿ ಭರವಸೆಯ ಮಾತುಗಳನ್ನಾಡುತ್ತಾ ಮಕ್ಕಳಿಗೆ ಸ್ಪರ್ಧಾತ್ಮಕ ಜಗತ್ತಿನ ಪ್ರೋತ್ಸಾಹ ನೀಡಿದರು.

ಸಾರ್ವಜನಿಕ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ ಸೊನ್ನದ ಅವರು ಕಳೆದ ಸಾಲಿನಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳ ಸಾಧನೆಯನ್ನು ನೆನಪಿಸುತ್ತ 2024-25 ನೇ ಸಾಲಿನ ಶೈಕ್ಷಣಿಕ ಕಾರ್ಯ ಚಟುವಟಿಕೆಗಳನ್ನು ಸೂಚ್ಯವಾಗಿ ವಿವರಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ. ಹೊಂಗಯ್ಯರವರು ಮಕ್ಕಳ ಶೈಕ್ಷಣಿಕ ಪ್ರಗತಿಯ ಹಿತದೃಷ್ಟಿಯಿಂದ ಎಲ್ಲ ಶಿಕ್ಷಕರು ರಾಜ್ಯದಲ್ಲಿಯೇ ಪ್ರಥ-'ಮ ಸ್ಥಾನ ಬರುವಂತೆ ಶ್ರಮಿಸಲು ಕರೆ ನೀಡಿದರು.

ಉಪ ಪ್ರಾಂಶುಪಾಲ ಸಿ. ಎಸ್. ಕಾಂಬಳೆ ಸ್ವಾಗತಿಸಿದರು. ಎಮ್. ಎಫ್ ಅರಳಿಮಟ್ಟಿ ಇವರು ನಿರೂಪಿಸಿದರು ಹಾಗೂ ಹೆಚ್. ಡಿ ಮಸೂತಿರವರು ವಂದಿಸಿದರು.

ಈ ಸಂದರ್ಭದಲ್ಲಿ ಡೈಟ್‌ನ ಹಿರಿಯ ಉಪನ್ಯಾಸಕರು ಎಸ್ ಎ ಮುಜಾವರ, ಕೆ. ಪಿ. ಎಸ್. ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು ಪ್ರೌಢ ಶಾಲಾ ವಿಭಾಗದ ಶಿಕ್ಷಕ ವೃಂದದವರಾದ ಎಸ್. ಜಿ. ಹಂಚಿನಾಳ, ಎನ್. ಎಂ. ಹುಂಡೇಕಾರ, ಆರ್. ಆರ್. ಬಿರಾದಾರ, ವ್ಹಿ. ಬಿ. ಇಂಡಿ, ಎಸ್. ಎಸ್. ಬಿರಾದಾರ, ಆರ್. ಎಸ್. ಹಕೀಮ್, ಎ. ಜೆ. ದಖನಿ, ಎಂ. ಎಫ್. ಅಂಗಡಿ, ಶೋಭಾದೇವಿ ರಾಜಾಪೂರ, ಶೈಲಾ ಶೀಲವಂತ, ಬಿ. ಎ. ಬಿರಾದಾರ, ಬಿ. ಬಿ. ಕೋರೆ, ಎನ್. ಎಂ. ಪಟೇಲ ಹಾಗೂ ಇತರರು ಭಾಗಿಯಾಗಿದ್ದರು.

# ಕ್ರೀಡಾ ಮೌಲ್ಯ ಹೆಚ್ಚಿಸಿದ ಅಶೋಕಕುಮಾರ ಜಾಧವ :ಹೆಗಡೆ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಪ್ರತಿಭಾವಂತ ಕ್ರೀಡಾಳುಗಳನ್ನು ಗುರುತಿಸಿ ಬೆಳೆಸುವುದರ ಮೂಲಕ ಕಾಲೇಜು ಸೇರಿದಂತೆ ಪಟ್ಟಣದಲ್ಲಿ ಕ್ರೀಡಾ ಮೌಲ್ಯವನ್ನು ಹೆಚ್ಚಿಸಿದ ಹಿರಿಮೆ ದೈಹಿಕ ಶಿಕ್ಷಣ ನಿರ್ದೇಶಕ ಅಶೋಕಕುಮಾರ ಜಾಧವ ಅವರದ್ದಾಗಿದೆ ಎಂದು ಪ್ರಾಂಶುಪಾಲ ಅಶೋಕ ಹೆಗಡೆ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥ-'ಮ ದರ್ಜೆ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಎ.ಆರ್. ಜಾಧವ ಶುಕ್ರವಾರ ಸೇವಾನಿವೃತ್ತಿ ಹೊಂದಿದ ನಿಮಿತ್ಯ ಬಿಳ್ಕೋಡುವ ಸಮಾರಂಭದ ಅಧ್ಯಕ್ಷತೆ ವಹಿಸಿ, ಸನ್ಮಾನಿಸಿ ಮಾತನಾಡಿದರು. ಶೈಕ್ಷಣಿಕ ಸಂಸ್ಥೆಯ ವಿದ್ಯಾರ್ಥಿಗಳನ್ನು ತಮ್ಮ ಕ್ರೀಡಾ ಚಟುವಟಿಕೆಗಳ ಮೂಲಕ ವಿಶ್ವವಿದ್ಯಾಲಯಕ್ಕೆ ಪರಿಚಯಿಸಿ ಕ್ರೀಡಾ ಸೇವೆ ಸಲ್ಲಿಸಿದ ನಿರ್ದೇಶಕರ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.


ಅಧಿಕ್ಷಕ ಜಗನ್ನಾಥ ಸಜ್ಜನ, ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕ ಶಿವಪುತ್ರ ಜಾಲವಾದಿ, ಅತಿಥಿ ಉಪನ್ಯಾಸಕ ಭೀಮನಗೌಡ ಬಿರಾದಾರ ಮಾತನಾಡಿ, ಕ್ರೀಡಾಕ್ಷೇತ್ರಕ್ಕೆ ದೈಹಿಕ ಶಿಕ್ಷಣ ನಿರ್ದೇಶಕರು ನೀಡಿದ ಕೊಡುಗೆಯನ್ನು ಸ್ಮರಿಸಿ ಭಾವುಕರಾದರು.

ಸನ್ಮಾನಿತ ಎ.ಆರ್.ಜಾಧವ ಮಾತನಾಡಿ, ಸಾಧನೆ ಮಾಡಲೇಬೇಕು ಎಂಬ ಛಲದಿಂದ ಬಂದು ಇಲ್ಲಿ ಸಾಧನೆ ಮಾಡಿದ್ದೇನೆ. ಇದು ನನಗೆ ಅತ್ಯಂತ ತೃಪ್ತಿನೀಡಿದೆ. ಈವರೆಗಿನ ಕಾಲೇಜಿನ ಎಲ್ಲಾ ಕ್ರೀಡಾ ಚಟುವಟಿಕೆಗಳಿಗೆ ಸಹಕಾರ ನೀಡಿದ ಉಪನ್ಯಾಸಕವೃಂದ, ಪಟ್ಟಣದ ಜನತೆ, ಮುಖ್ಯವಾಗಿ ವಿದ್ಯಾರ್ಥಿ ವೃಂದಕ್ಕೆ ಅಭಿನಂದನೆ ಸಲ್ಲಿಸಿದರು. ನಂತರ ದೇವರಹಿಪ್ಪರಗಿ ನಾಗರೀಕ ಬಳಗದ ವತಿಯಿಂದ ಅದ್ದೂರಿಯಾಗಿ ಸನ್ಮಾನಿಸಲಾಯಿತು.

ನಿವೃತ್ತ ಪ್ರಾಂಶುಪಾಲ ಎಸ್. ಕೆ.ಬಾಗಿ, ಸಹಾಯಕ ಕನ್ನಡ ಪ್ರಾಧ್ಯಾಪಕಿ ಪ್ರೇಮಕುಮಾರಿ, ಅತಿಥಿ ಉಪನ್ಯಾಸಕರಾದ ಮಹಾದೇವಪ್ಪ ಶಿವಶರಣರ, ಶಂಕರಗೌಡ ಗದಿಗೆಪ್ಪಗೌಡರ, ಗೋಪಾಲ ಚಕ್ರಸಾಲಿ, ಬಸವರಾಜ ಹೊನಮಟ್ಟಿ, ಜ್ಯೋತಿ ಹೂಗಾರ, ಸರಿತಾ ಪಾಟೀಲ, ವಿಜಯಲಕ್ಷ್ಮಿ ಪಾಟೀಲ, ಯಾಸ್ಮೀನ್ ನದಾಫ್, ರಾಜೇಶ್ವರಿ, ಯಾಸ್ಮೀನ್ ಗಿರಗಾಂವ, ಪದ್ಮಜಾ ಬೆಳ್ಳಿಕಟ್ಟಿ, ಶಾರದಾ ಸೋಮಾಪೂರ, ಮಂಜುನಾಥ ಮಾನೆ ಸೇರಿದಂತೆ ಭೋಧಕ, ಭೋದಕೇತರ ಸಿಬ್ಬಂದಿ, ವಿದ್ಯಾರ್ಥಿ, ವಿದ್ಯಾರ್ಥಿನೀಯರು ಇದ್ದರು.

# ಪತ್ರಕರ್ತ ಸುನೀಲ ಉಪ್ಪಿನ ಗೆ ಪಿತೃವಿಯೋಗ

**ಉದಯರಶ್ಮಿ ನ್ಯೂಸ್**



ಆಲಮೇಲ: ಪಟ್ಟಣದ ಬಣಜಿಗ ಸಮಾಜದ ಹಿರಿಯರು, ಹಿರಿಯ ಬಂಡಾಯ ಸಾಹಿತಿ ಸಿದ್ದರಾಮ ಉಪ್ಪಿನ ಅವರ ಸಹೋದರರಾದ ಬಸವರಾಜ್ ಉಪ್ಪಿನ(70) ಅವರು ಬುಧವಾರ ನಿಧನರಾದರು.

ಮೃತರು ಓರ್ವ ಪುತ್ರ, ಓರ್ವ ಪುತ್ರಿ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರು ಪತ್ರಕರ್ತ ಸುನೀಲ ಉಪ್ಪಿನ ಅವರ ತಂದೆ. ಹಿರಿಯ ಪತ್ರಕರ್ತ ಶಿವಕುಮಾರ ಉಪ್ಪಿನ, ಚಿತ್ರನಟ ಸಂತೋಷ ಉಪ್ಪಿನ ಅವರ ಚಿಕ್ಕಪ್ಪನವರು.

ಸಂತಾಪ: ಸಿಂದಗಿ ಶಾಸಕ ಅಶೋಕ ಮನಗೂಳಿ, ಮಾಜಿ ಶಾಸಕ ರಮೇಶ ಭೂಸನೂರ, ಮಾಜಿ ಶಾಸಕ ಅಶೋಕ ಶಾಬಾದಿ, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಇಂದುಶೇಖರ ಮಣೂರ ಹಾಗೂ ಆಲಮೇಲ ಪತ್ರಿಕಾ ಬಳಗದವರು ಸಂತಾಪ ವ್ಯಕ್ತಪಡಿಸಿದ್ದಾರೆ.

# ಉರ್ದು ಶಾಲೆಗೆ ಅಧಿಕಾರಿಗಳ ತಂಡ ಭೇಟಿ-ಪರಿಶೀಲನೆ

**ಉದಯರಶ್ಮಿ ನ್ಯೂಸ್**



ಗಿಡ-ಗಂಟಿಗಳಿಂದ ಕೂಡಿದ್ದ ಶಾಲಾ ಆವರಣ ಸ್ವಚ್ಛಗೊಳಿಸಿರುವುದು.

ಚಿಮ್ಮಡ: ಗ್ರಾಮದ ಸರಕಾರಿ ಉರ್ದು ಕಿರಿಯ ಪ್ರಾಥಮಿಕ ಶಾಲೆಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳ ತಂಡ ಬುಧವಾರದಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇಲ್ಲಿನ ಉರ್ದು ಶಾಲೆಯ ದುಸ್ಥಿತಿಯ ಕುರಿತು ಬುಧವಾರ 'ಉದಯರಶ್ಮಿ' ಪತ್ರಿಕೆಯಲ್ಲಿ ಪ್ರಕಟವಾದ "ಶಿಥಿಲ ಕೊಠಡಿಯಲ್ಲಿ ಮಕ್ಕಳಿಗೆ ವಿದ್ಯಾರ್ಜನೆ" ಎಂಬ ತಲೆಬರಹದ ವಿಶೇಷ ವರದಿ ಪ್ರಕಟಿಸಿದ ದಿನವೇ ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀಮತಿ ಪಂಚಾಕ್ಷರಿ ನಂದೇಶ್ವರ, ಪ್ರಭಾರಿ ಕ್ಷೇತ್ರ ಸಮನ್ವಯಾಧಿಕಾರಿ ಆರ್. ಎಸ್. ಅವಟಿ, ಉರ್ದುವಿಭಾಗದ ಶಿಕ್ಷಣ ಸಂಯೋಜಕಿ ಶ್ರೀಮತಿ ಸಮೀನಾ ಕೌಸರ, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಎ.ಐ. ಬಾಗೇವಾಡಿಯವರು ಶಾಲೆಗೆ ಭೇಟಿನೀಡಿ ಪರಿಶೀಲನೆ ನಡೆಸಿ ಶಾಲಾ ಮುಖ್ಯೋಪಾಧ್ಯಾಯ ಝೆಡ್.ಎಚ್. ಇಂಡಿಕರ ಅವ-ರಿಂದ ಮಾಹಿತಿ ಪಡೆದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎ.ಕೆ. ಬಸನ್ನವರ ಪತ್ರಿಕೆಯೊಂದಿಗೆ ಮಾತನಾಡಿ, ಶಿಥಿಲ ಕೊಠಡಿಗಳನ್ನು ತರಗತಿ ನಡೆಸಲು ಹಾಗೂ ಬಿಸಿಯೂಟದ ಅಡುಗೆ ತಯಾ-ರಿಸಲು ಬಳಸಬಾರದೆಂದು ಮುಖ್ಯ ಗುರುಗಳಿಗೆ ಸೂಚಿಸಲಾಗಿದ್ದು ಕೆರೆ ದಂಡೆಮೇಲೆ ನಿರ್ಮಿಸಲಾಗಿರುವ ಸುಸಜ್ಜಿತ ಕೊಠಡಿಗಳನ್ನು ದುರಸ್ಥಿ ಹಾಗೂ ಸ್ವಚ್ಛ ಗೊಳಿಸಿ ಕಛೇ-ರಿಗಾಗಿ ಬಳಕೆ ಮಾಡಬೇಕೆಂದು ಸೂಚಿಸಲಾಗಿದ್ದು ಆದಷ್ಟು ಬೇಗ ಶಾಲೆಗೆ ಅವಶ್ಯವಿರುವಷ್ಟು ನೂತನ ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೆಂದರು.

# ದಾಖಲಾತಿ ಹೆಚ್ಚಿಸಿ ಕಲಿಕೆ ಉತ್ತೇಜಿಸಲು ಜಾಗೃತಿ ಅಭಿಯಾನ

**ಉದಯರಶ್ಮಿ ನ್ಯೂಸ್**




ಚಡಚಣ: ಪಟ್ಟಣದ ಶ್ರೀ ಸಂಗಮೇಶ್ವರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾಲಾ ಪ್ರಾರಂಭೋತ್ಸವ ಹಾಗೂ ದಾಖಲಾತಿ ಅಂದೋಲನ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಶ್ರೀ ಸಂಗಮೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯ ಗುರು ಅಮರೇಶ ಅಳಗುಂಡಗಿ ಅವರು ಮಾತನಾಡಿ, ಎರಡು ತಿಂಗಳಿಗೂ ಹೆಚ್ಚು ಕಾಲ ಬೇಸಿಗೆಯ ಅವಧಿಯಲ್ಲಿ ಮಕ್ಕಳು ಮಾನಸಿಕ ಹಾಗೂ ದೈಹಿಕವಾಗಿ ಶಾಲೆಯಿಂದ ದೂರವಿದ್ದು ಅನ್ಯ ಕೆಲಸ ಕಾರ್ಯದಲ್ಲಿ ತೊಡಗಿ ಶಾಲೆಯತ್ತ ಗಮನ ಹರಿಸದಿರುವುದು ಸಹಜ, ಆದರೆ ಮರಳಿ ಶೈಕ್ಷಣಿಕ ವರ್ಷದ ಅವಧಿಗಳು ಪ್ರಾರಂಭವಾಗುತ್ತಿದ್ದು ಮಕ್ಕಳ ಬರುವಿಕೆಗೆ ಸಹಕರಿಸುವುದು ತುಂಬಾ ಅಗತ್ಯವಿದೆ ಎಂದರು.

ಆಂಗ್ಲ ಮಾಧ್ಯಮ ಶಾಲೆಯ ಆಡಳಿತ ಅಧಿಕಾರಿಗಳಾದ ವರ್ಷಾ ಮುತ್ತಿನ ಮಾತನಾಡಿ, ಸಾರ್ವಜನಿಕ ಶಿಕ್ಷಣ ಇಲಾಖೆಯು ಈ ವರ್ಷವೂ ಕೂಡ ಜಾಗೃತೆಯಿಂದ ಕಾರ್ಯನಿರ್ವಹಿಸಲು ಮುಂದಾಗಿದೆ. ದಾಖಲಾತಿ ಹೊಂದಿದ ಎಲ್ಲಾ ಮಕ್ಕಳು ನಿತ್ಯ ತಪ್ಪದೆ ಶಾಲೆಗೆ ಆಗಮಿಸಿ ಹಾಜರಾತಿಯನ್ನು ಹೆಚ್ಚಿಸುವುದು ಕೂಡ ಮಹತ್ವದ್ದಾಗಿದೆ. ಆದ್ದರಿಂದ ಪಾಲಕ ಪೋಷಕರು ವಿಶೇಷವಾದ ಕಾಳಜಿವಹಿಸಿ ಮಕ್ಕಳನ್ನು ಶಾಲೆಗೆ ಕಳುಹಿಸಿ ದೇಶದ ಸತ್ಪ್ರಜೆಯನ್ನಾಗಿ ರೂಪಿಸಿ ಎಂದು ಕರೆನೀಡಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗ ಹಾಗೂ ಮಕ್ಕಳ ಪಾಲಕ ಪೋಷಕರು ಉಪಸ್ಥಿತರಿದ್ದರು.

ಶಾಲೆಯನ್ನು ಸ್ವಚ್ಛಗೊಳಿಸುವುದ ರೊಂದಿಗೆ ತಳಿರು ತೋರಣಗಳಿಂದ ಅಲಂಕರಿಸಿ ಮಕ್ಕಳನ್ನು ಕೈಬೀಸಿ ಕರೆಯುವಂತೆ ಮಾಡಿದ ಇಲ್ಲಿನ ಸಿಬ್ಬಂದಿಗಳು ಪ್ರಶಂಸೆಗೆ ಪಾತ್ರರಾದರು. ನಂತರ ಶಾಲಾ ಮಕ್ಕಳಿಗೆ ಸಿಹಿ ಹಂಚಲಾಯಿತು.

# ಚಡಚಣ ವಿರಕ್ತಮಠದಿಂದ ಧಾರ್ಮಿಕ ವಾತಾವರಣ :ಬಗಲಿ

**ಉದಯರಶ್ಮಿ ನ್ಯೂಸ್**



ಚಡಚಣ: ಊರಿಗೊಂದು ಮಠ, ಮಠಕ್ಕೊಬ್ಬ ಉತ್ತಮ ಗುರು ಬೇಕೆನ್ನುವಂತೆ ಇಲ್ಲಿಯ ವಿರಕ್ತಮಠವು ಇತಿಹಾಸದ ಪರಂಪರೆ ಸಾರುವಂತಿದೆ. ಈಗಿನ ವಿರಕ್ತಮಠದ ಷಡಕ್ಷರದೇವರು ಕಳೆದ ಹತ್ತು ವರ್ಷಗಳಿಂದ ಚಡಚಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಜರುಗುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಮುಂಚೂಣಿಯಲ್ಲಿದ್ದು ಮಾರ್ಗದರ್ಶಕರಾಗಿದ್ದಾರೆ. ಇವ-ರಿಂದ ಧಾರ್ಮಿಕ ಕಾರ್ಯಕ್ರಮಗಳು ನಿರಂತರ ಸಾಗುತ್ತಿವೆ ಎಂದು ನಿವೃತ್ತ ಪ್ರಾಚಾರ್ಯ ಆರ್. ಪಿ. ಬಗಲಿ ಹೇಳಿದರು.

ಪಟ್ಟಣದ ವಿರಕ್ತಮಠದ ಲಿಂ. ಶಿವಾನಂದ ಮಹಾಸ್ವಾಮಿಗಳ 28 ನೇ ಪುಣ್ಯಸ್ಮರಣೆಯ ನಿಮಿತ್ತ ಲೋಕಾಪೂರದ ಮಹಾಂತಸ್ವಾಮಿಗಳು ಹಿರೇಮಠ ಇವರಿಂದ ಪ್ರವಚನ ಕಾರ್ಯಕ್ರಮದ ಉದ್ಘಾಟನೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತ, ಮಠ ಮಾನ್ಯಗಳಿಂದ ಸಮಾಜದ ಉದ್ದಾರ. ಮಠಗಳು ಧಾರ್ಮಿಕ ರಕ್ಷಣೆಯ ಶಿಕ್ಷಣದ ಕೇಂದ್ರಗಳು. ಪುಣ್ಯಾರಾಧನೆ ಅದ್ದೂರಿಯಾಗಿ ಜರುಗಲಿ. ಎಲ್ಲರೂ ಭಾಗಿಯಾಗಿ ಧನ್ಯರಾಗಿರಿ ಎಂದು ಬಗಲಿ ಅವರು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ವಿರಕ್ತಮಠದ ಷಡಕ್ಷರದೇವರು ಮಾತನಾಡಿ, ಪಟ್ಟಣದ ಎಲ್ಲ ಭಕ್ತಾದಿಗಳು ಪ್ರವಚನ ಆಲಿಸಿ. ಸುಂದರ ಬದುಕಿಗೆ ಪ್ರವಚನ ಸಹಾಯಕಾರಿ. ಮಹಾಂತ ಸ್ವಾಮಿಗಳು ಉತ್ತಮ ಪ್ರವಚನ ಪಟುಗಳಾಗಿದ್ದಾರೆ ಎಂದರು.

ಜಿ. ಡಿ. ಪಾವಲೆ ಮಾತನಾಡಿ, ಪ್ರತಿವರ್ಷವೂ ಪುಣ್ಯಾರಾಧನೆ ಎಲ್ಲ ಭಕ್ತಾದಿಗಳ ಸಹಕಾರದಿಂದ ಅದ್ದೂರಿಯಾಗಿ ಜರುಗುತ್ತಿದೆ. ಎಲ್ಲರೂ ಪ್ರವಚನ ಆಲಿಸಿ, ಭಕ್ತಿಯ ಮಾರ್ಗದಲ್ಲಿ ಸಾಗಿರಿ. ಈ ಮಠವು ಪಟ್ಟಣಕ್ಕೆ ಕೇರೀಟವಿದ್ದಂತೆ ಎಂದರು.

ಎಸ್. ಕೆ. ಕುಲಕರ್ಣಿ, ಚಂದ್ರಶೇಖರ ಮಟ್ಟಿಕಲ್ಲಿ, ಬಸಯ್ಯಸ್ವಾಮಿ, ಸಾಂಗೋಲಿ ಸರ್, ಮಹಾದೇವ ಪಾವಲೆ, ಬಸವರಾಜ-ಅವಟಿ, ಚೇತನಕುಮಾರ ನಿರಾಳೆ ಸೇರಿದಂತೆ ಮಠದ ಭಕ್ತ ಕಮೀಟಿ ಉಪಸ್ಥಿತರಿದ್ದರು.

ಮಠದಲ್ಲಿ ದಿ.6 ರಂದು ಷಡಕ್ಷರ ಶಿವಯೋಗಿಗಳ ಗದ್ದುಗೆಗೆ ರುದ್ರಾಭಿಷೇಕ, ದಿ.8 ರಂದು ಕುಂಭೋತ್ಸವ, ಧರ್ಮಸಭೆ, ಉಡಿತುಂಬುವ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮ ದಿ.9 ರಂದು ಮುಂಜಾನೆ ಪುಷ್ಪನಮನ, ಜರುಗುವದು.

ದಿ.8 ರವರೆಗೆ ಸಂಜೆ 7ರಿಂದ 8.30 ರವರೆಗೆ ಮಹಾಂತ ಸ್ವಾಮಿಗಳ ಪ್ರವಚನ ಜರುಗುವದು ಎಂದು ಕಮೀಟಿ ಅವರು ತಿಳಿಸಿದ್ದರು.

# ರೈತರಿಗೆ ಬರಗಾಲ ಪರಿಹಾರದ ಬಗ್ಗೆ ಸ್ಪಷ್ಟತೆ ನೀಡಲು ರೈತಸಂಘ ಆಗ್ರಹ

**ಉದಯರಶ್ಮಿ ನ್ಯೂಸ್**



ವಿಜಯಪುರ: ಇತ್ತಿಚಿಗೆ ಮುಂಗಾರು ಹಂಗಾಮಿನ ಕುರಿತು ಕೇಂದ್ರ ಹಾಗೂ ರಾಜ್ಯ ಸರಕಾರ ನೀಡಿರುವ ಪರಿಹಾರದ ಮೊತ್ತದ ಬಗ್ಗೆ ಸಾಕಷ್ಟು ಗೊಂದಲಗಳಿದ್ದು ಅದರ ಬಗ್ಗೆ ಸ್ಪಷ್ಟತೆ ನೀಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ ಅವರಿಗೆ ಮನವಿ ಸಲ್ಲಿಸಿ ಇದಕ್ಕೆ ಉತ್ತರ ನೀಡುವಂತೆ ಆಗ್ರಹಿಸಿದರು

ಈ ವೇಳೆ ರೈತಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮಾತನಾಡುತ್ತ, ಎನ್.ಡಿ.ಆರ್. ಎಫ್ ಹಾಗೂ ಎಸ್.ಡಿ.ಆರ್. ಎಫ್ ಮಾರ್ಗಸೂಚಿಯಂತೆ ಕೇಂದ್ರ ಸರಕಾರ ನೀಡಿರುವ ಬರ ಪರಿಹಾರದ ಮೊತ್ತದ ಸಮನಾಗಿ ರಾಜ್ಯ ಸರಕಾರ ಕೂಡಾ ಕೊಡಬೇಕು ಎಂಬ ನಿಯಮಾವಳಿ ಇದೆ, ಅಂ-ದರೆ ಕೇಂದ್ರ ಸರಕಾರ ಒಂದು ಹೆಕ್ಟರ್‌ಗೆ 8500 ರೂ ಗರಿಷ್ಟ 2 ಹೆಕ್ಟರ್ ಅಂದರೆ 17000 ಹಣ ಕೊಡಬಹುದು, ಅದಕ್ಕೆ ಸರಿಸಮನಾಗಿ ರಾಜ್ಯ ಸರಕಾರ ಕೂಡಾ 8500 ಒಂದು ಹೆಕ್ಟೆರಗೆ ಗರಿಷ್ಟ 2 ಹೆಕ್ಟೆರ್ ಅಂದರೆ ಅವರು ಕೂಡಾ 17000 ಸೇರಿಸಿ ಒಟ್ಟಾರೆಯಾಗಿ 2 ಹೆಕ್ಟೆರ ಇರುವ ರೈತರಿಗೆ 34000 ಪರಿಹಾರ ನೀಡಬೇಕೆಂಬುದು ಒಂದು ಮಾಹಿತಿ,

ಆದರೆ ಇತ್ತಿಚಿಗೆ ಕೇಂದ್ರ ಸರಕಾರ ನೀಡಿರುವ ಹಣದಲ್ಲಿ ರಾಜ್ಯ ಸರಕಾರ ಚುನಾವಣಾ ಸಂದರ್ಭದಲ್ಲಿ ಮುಂಗಡ ನೀಡಿರುವ 2000 ಹಣ ಮುರಿದುಕೊಂಡು ಉಳಿದ ಹಣವನ್ನು ರೈತರಿಗೆ ಹಾಕಿದ್ದಾರೆ ಎನ್ನುವುದು ಕಣ್ಣಿಗೆ ಕಾಣುತ್ತಿದೆ. ಆದ್ದರಿಂದ ಈ ಕುರಿತು ಸ್ಪಷ್ಟತೆ ನೀಡಬೇಕು ಎಂದರು.

ಜಿಲ್ಲೆಯಲ್ಲಿ ಇನ್ನು ಸುಮಾರು 15000 ಕ್ಕೂ ಹೆಚ್ಚಿನ ರೈತರಿಗೆ ಬರಗಾಲ ಪರಿಹಾರ ಬಂದಿಲ್ಲ, ರೈತರು ಈ ಬಗ್ಗೆ ಆತಂಕಗೊಂಡಿರುತ್ತಾರೆ, ಅವ-ರಿಗೆ ಇಲಾಖೆಯ ಅಧಿಕಾರಿಗಳು ತಪ್ಪು ಸಂದೇಶ ನೀಡುತ್ತಿದ್ದಾರೆ, ಹೊಲದಲ್ಲಿ ತೊಗರಿ ಬೆಳೆ ಇದ್ದರೆ ಬರುವುದಿಲ್ಲ, ಕಾಲುವೆ ಹಾಯ್ದರೆ ಬರುವುದಿಲ್ಲ, ಹೀಗೆ ಬೇರೆ ಬೇರೆ ತಪ್ಪು ಮಾಹಿತಿ ನೀಡುತ್ತಿದ್ದಾರೆ, ಕೂಡಲೇ ತಂತ್ರಜ್ಞಾನದ ಅವಘಡದಿಂದ ಆಗಿರುವ ತಪ್ಪುಗಳನ್ನು ಸರಿಪಡಿಸಿ ಜಿಲ್ಲೆಯಲ್ಲಿ ಈ ವರ್ಷ ಸಂಪೂರ್ಣ ಬರಗಾರ ಎಂದು ಸರಕಾರವೇ ಘೋಷಣೆ ಮಾಡಿದೆ, ಆದ್ದರಿಂದ ಎಲ್ಲರಿಗೂ ತಪ್ಪದೇ ಪರಿಹಾರ ನೀಡಬೇಕು ಎಂಬುದು ನಮ್ಮ ಆಗ್ರಹವಾಗಿದೆ ಎಂದರು.

ಗೌರವಧನ ನೀಡಿ ಹೊರಗುತ್ತಿಗೆ ಮೂಲಕ ಸಮೀಕ್ಷೆ ಮಾಡಿರುವ ಇಲಾಖೆಯ ಯಡವಟ್ಟಿನಿಂದ ಜಮೀನು ಪಾಳು ಎಂದು ತೋರಿಸಿದ್ದಾರೆ, ಜೂನನಲ್ಲಿ ಬಿತ್ತನೆ ಮಾಡಿರುವ ರೈತರು ನಾಟಿ ಆಗದ ಕಾರಣ ಹರಗಿ ಹೊಲ ಖಾಲಿ ಮಾಡಿರುತ್ತಾರೆ, ಆದರೆ ಸಮೀಕ್ಷೆ ಮುಂದೆ ಒಂದೆರಡು ತಿಂಗಳ ನಂತರ ಸಮೀಕ್ಷೆ ಮಾಡಿರುತ್ತಾರೆ. ಆದ್ದ-ರಿಂದ ಕೂಡಲೇ ಜಿಲ್ಲೆಯಲ್ಲಿ ಎಲ್ಲಾ ರೈತರಿಗೂ ಬರಗಾಲ ಪರಿಹಾರ ನೀಡಬೇಕು ಎಂದರು.

ಈ ವೇಳೆ ವಿಜಯಪುರ ತಾ ಅಧ್ಯಕ್ಷರಾದ ಮಹಾದೇವಪ್ಪ ತೇಲಿ, ಗೌರವಾಧ್ಯಕ್ಷರಾದ ಕಲ್ಲಪ್ಪ ಪಾರಶೆಟ್ಟಿ, ಜಿಲ್ಲಾ ಸಂಚಾಲಕರಾದ ರಾಮನಗೌಡ ಪಾಟೀಲ, ತಿಕೋಟಾ ತಾ.ಉಪಾಧ್ಯಕ್ಷರಾದ ಶಾನೂರ ನಂದರಗಿ, ಯುವ ಘಟಕದ ತಾ ಅಧ್ಯಕ್ಷರಾದ ಪ್ರಭುಲಿಂಗ ಕಾರಜೋಳ ಇದ್ದರು.

# ರೇವತಗಾಂವ: ಶಾಲಾ ಪ್ರಾರಂಭೋತ್ಸವಕ್ಕೆ ಅದ್ಧೂರಿ ಚಾಲನೆ

**ಉದಯರಶ್ಮಿ ನ್ಯೂಸ್**



ಚಡಚಣ: ಶಿಕ್ಷಣವೆಂದರೆ ಕೇವಲ ಅಕ್ಷರ ಜ್ಞಾನದ ಗಳಿಕೆ, ಪಠ್ಯದ ಓದು ಮಾತ್ರವಲ್ಲ, ಅದು ಮಕ್ಕಳ ಸರ್ವತೋಮುಖ ಬೆಳವಣಿಗೆಯ ಮಹತ್ವದ ಕಾಲಘಟ್ಟ. ಶಾಲೆಗಳ ಅಭಿವೃದ್ಧಿ ಹೊಂದಿದರೆ, ಭಾರತದ ಭವಿಷ್ಯ ಇನ್ನಷ್ಟು ಭದ್ರವಾಗುತ್ತದೆ ಎಂದು ರೇವತಗಾಂವ ಗ್ರಾಮದ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರು ಆರ್.ಎನ್.ಹತ್ತಳ್ಳಿಯವರು ಹೇಳಿದರು.

ರಾಜ್ಯಾದ್ಯಂತ ಶುಕ್ರವಾರದಿಂದ ಶಾಲಾ ಪ್ರಾರಂಭೋತ್ಸವಕ್ಕೆ ಸರ್ಕಾರ ವಿದ್ಯುಕ್ತವಾಗಿ ಚಾಲನೆ ದೊರೆತ್ತಿದ್ದು, ಇತ್ತ ರೇವತಗಾಂವ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಗುಲಾಬಿ ಹೂವುಗಳನ್ನು ನೀಡಿವ ಮೂಲಕ ಸ್ವಾಗತ ಕೋರಿ ಮಾತನಾಡಿದ ಅವರು. 2024–25ನೇ ಶೈಕ್ಷಣಿಕ ವರ್ಷವನ್ನು 'ಶೈಕ್ಷಣಿಕ ಬಲವರ್ಧನೆ ವರ್ಷ' ಎಂದು ಸಂಕಲ್ಪ ಮಾಡಲಾಗಿದೆ. ಪ್ರಸ್ತುತ ಸನ್ನಿವೇಶದಲ್ಲಿ ಬದಲಾಗುತ್ತಿರುವ ಶೈಕ್ಷಣಿಕ ಅವಶ್ಯಕತೆಗಳು ಮತ್ತು ತಂತ್ರಜ್ಞಾನ ಆಧಾರಿತ ಕಲಿಕೆ ಹೊಂದಾಣಿಕೆ ಮಾಡಿಕೊಂಡು ಮಗುವಿನ ಕಲಿಕಾ ಬಲವರ್ಧನೆ ಆಗಬೇಕಾಗುತ್ತದೆ. ಅಲ್ಲದೇ ಮಕ್ಕಳನ್ನು ಇಂಗ್ಲಿಷ್ ಭಾಷೆಯ ಪರಿಣತರನ್ನಾಗಿಸುವ ನಿಟ್ಟಿನಲ್ಲಿ 'ಸ್ಪೋಕನ್ ಇಂಗ್ಲಿಷ್' ತರಗತಿಗಳನ್ನು ನಡೆಸಲಾಗುತ್ತದೆ ಎಂದು ಹೇಳಿದರು.

ಈ ವೇಳೆ ಪಾಲಕ ಪ್ರತಿನಿಧಿ ಅಶೋಕ ಬಿಜ್ಜರಗಿಯವರು ಸರಸ್ವತಿ ಮಾತೆಯ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿ ಮಾತನಾಡಿದ ಅವರು. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ. ಪ್ರತಿಭಾವಂತ ಶಿಕ್ಷಕರಿದ್ದಾರೆ. ಪಠ್ಯೇತರ ಚಟುವಟಿಕೆಗಳಿಗೂ ಪ್ರೋತ್ಸಾಹವಿದೆ. ಮಕ್ಕಳಲ್ಲಿ ನೈತಿಕ ಶಿಕ್ಷಣ ಬೆಳೆಸಲು ವಿಶೇಷ ಒತ್ತು ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ವಿವಿಧ ಸೌಲಭ್ಯಗಳನ್ನು ಒದಗಿಸುವ ಮೂಲಕ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಉತ್ತಮ ಸಂಸ್ಕಾರ ಹಾಗೂ ಕಲಿಕೆಯೊಂದಿಗೆ ಪೋಷಕರಿಗೆ ಗೌರವ ಸಲ್ಲಿಸಬೇಕು. ಮಕ್ಕಳ ಆಟ–ಪಾಠದೊಂದಿಗೆ ಶಿಕ್ಷಣ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಶಾಲೆಯ ಮುಖ್ಯದ್ವಾರಗಳಲ್ಲಿ ತಳಿರು ತೋರಣಗಳಿಂದ ಶೃಂಗರಿಸಿ, ಶಾಲಾ ಆವರಣದಲ್ಲಿ ರಂಗೋಲಿ ಬಿಡಿಸಿ ಹಬ್ಬದ ವಾತಾವರಣ ನಿರ್ಮಿಸಲಾಗಿತ್ತು. ವಿದ್ಯಾರ್ಥಿಗಳಿಗೆ ಸಿಹಿ ನೀಡಿ ಅದ್ದೂರಿಯಾಗಿ ಸ್ವಾಗತಿಸಲಾಯಿತು. ಶಾಲಾ ಪ್ರಾರಂಭೋತ್ಸವವನ್ನು ಶಿಕ್ಷಕರು ಹಾಗೂ ಪಾಲಕರುಗಳು ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಗುಲಾಬಿ ಹೂವು ನೀಡುವ ಮೂಲಕ ಸಡಗರದಿಂದ ಹೊಸ ಕಲಿಕಾ ವರ್ಷವನ್ನು ಬರಮಾಡಿಕೊಂಡರು. ಅಲ್ಲದೇ ಶಾಲೆಗೆ ಆಗಮಿಸಿದ ಮಕ್ಕಳಿಗೆ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಿಸಲಾಯಿತು. ಮಧ್ಯಾಹ್ನ ಬಿಸಿಯೂಟದಲ್ಲಿ ವಿದ್ಯಾರ್ಥಿಗಳಿಗೆ ಜೀಲೇಬಿ ನೀಡಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರುಗಳಾದ ಎಸ್.ಜೆ.ಬಿಜ್ಜರಗಿ, ಎಸ್.ಡಿ.ಆದಿಗೊಂಡೆ, ಪಿ.ಎ.ವಾಲಿಕಾರ, ಎಂ.ಕೆ.ಬಗಲಿ, ಎ.ಎಚ್.ಬಗಲಿ, ಬಿ.ಎಚ್.ಪೂಜಾರಿ, ಎನ್.ಎಸ್.ಘೊಡೇಸವಾರ, ಎಂ.ಎಸ್.ಶೇಖ, ಹೀನಾ ಸೈಯದರವರುಗಳು ಸೇರಿದಂತೆ ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಸಿ ವಿತರಿಸುವ ಮೂಲಕ ಶಾಲಾ ಆರಂಭೋತ್ಸವ

**ಉದಯರಶ್ಮಿ ನ್ಯೂಸ್**



ವಿಜಯಪುರ: ಶ್ರೀ ರುಕ್ಮಾಂಗದ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಸಸಿ ವಿತರಿಸುವ ಮೂಲಕ ಶಾಲಾ ಪ್ರಾರಂಭೋತ್ಸವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಅರುಣ ಸೋಲಾಪೂರಕರ, ಗೌರವ ಕಾರ್ಯದರ್ಶಿ ಮುಕುಂದ ಕುಲಕರ್ಣಿ, ಉಪಾಧ್ಯಕ್ಷರಾದ ವ್ಹಿ.ಎಸ್.ಗಾಯಿ, ಜಂಟಿ ಗೌರವ ಕಾರ್ಯದರ್ಶಿಗಳಾದ ಆರ್.ಎಸ್. ದೇಶಪಾಂಡೆ, ಕೆಬಿಎಸ್ ನಂ. 04 ಸಿಆರ್‌ಪಿಯಾಧ ಶ್ರೀಮತಿ ಗೀತಾ ತಳಕಲ್, ಶ್ರೀ ರುಕ್ಮಾಂಗದ ಪ್ರಾಥಮಿಕ, ಬಾಲಕ ಮತ್ತು ಬಾಲಕಿಯರ ಪ್ರೌಢ ಶಾಲೆಯ ಮುಖ್ಯ ಗುರುಗಳು ಮತ್ತು ಸಿಬ್ಬಂಧಿವರ್ಗದವರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮ

## ತಂಬಾಕು ಮುಕ್ತ ಸಮಾಜ ನಿರ್ಮಾಣ ಪ್ರತಿಯೊಬ್ಬರ ಜವಾಬ್ದಾರಿ :ನ್ಯಾ. ಅಂಬಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ತಂಬಾಕು ಉತ್ಪನ್ನಗಳ ಸೇವನೆಯಿಂದ ದುಷ್ಪರಿಣಾಮಗಳು ಬೀರುತ್ತಿದ್ದು, ಇದಕ್ಕೆ ಕಡಿವಾಣ ಅತ್ಯವಶ್ಯಕವಾಗಿದ್ದು, ತಂಬಾಕು ಮುಕ್ತ ಸಮಾಜ ನಿರ್ಮಾಣ ಮಾಡುವುದು ಸಮಾಜದ ಪ್ರತಿಯೊಬ್ಬ ವ್ಯಕ್ತಿಯ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಮಲ್ಲಿಕಾರ್ಜುನ ಅಂಬಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಹಾಗೂ ವಿವಿಧ ಇಲಾಖೆ, ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ಜಿಲ್ಲಾ ಪಂಚಾಯತ್ ಹತ್ತಿರವಿರುವ ಗಾಂಧಿಭವನದ ಸಭಾಂಗಣದಲ್ಲಿ ವಿಶ್ವ ತಂಬಾಕು ರಹಿತ ದಿನದ ಅಂಗವಾಗಿ ಹಮ್ಮಿಕೊಂಡ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿದ ಅವರು ಮಾತನಾಡಿದರು.

ಸಮಾಜದ ಮಕ್ಕಳು, ಯುವಜನಾಂಗ ವಿವಿಧ ದುಶ್ಚಟಗಳಿಗೆ ಬಲಿಯಾಗುತ್ತಿವೆ. ಈ ವಿಷಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಇದಕ್ಕೆ ಕಡಿವಾಣ ಅತ್ಯವಶ್ಯಕವಾಗಿದೆ. ತಂಬಾಕು ಉತ್ಪನ್ನಗಳಿಂದ ಆಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ನೈತಿಕತೆಯಿಂದ ಜವಾಬ್ದಾರಿಯನ್ನು ಅರಿತುಕೊಂಡು ಅರಿವು ಹೊಂದುವುದಲ್ಲದೇ, ಈ ಕುರಿತು ಪ್ರತಿಯೊಬ್ಬರಲ್ಲಿಯೂ ಅರಿವು ಮೂಡಿಸುವ ಅವಶ್ಯಕತೆ ಇದೆ. ಅರಿವು ಮೂಡಿಸುವ ಕಾರ್ಯದಲ್ಲಿ ಮಾಧ್ಯಮದವರ ಪಾತ್ರವೂ ಸಹ ಅತಿಮುಖ್ಯವಾಗಿದೆ. ಮಾಧ್ಯಮಗಳ ಮೂಲಕವೂ ಪ್ರತಿದಿನ ಈ ಕುರಿತು ವ್ಯಾಪಕ ಪ್ರಚಾರ ಕೈಗೊಂಡು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಇಂದಿನ ಡಿಜಿಟಲೀಕರಣ ಯುಗದಲ್ಲಿರುವ ಎಲ್ಲ ಸಾಧನಗಳನ್ನು ಬಳಸಿಕೊಂಡು ಸಾಮಾಜಿಕ ಜಾಲತಾಣಗಳ ಮೂಲಕ ತಂಬಾಕು ಉತ್ಪನ್ನ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಕೇವಲ ಕಾಯ್ದೆ–ಕಾನೂನುಗಳನ್ನು ಜಾರಿ ಮಾಡುವುದರಿಂದ ತಂಬಾಕು ಮುಕ್ತ ಸಮಾಜ ನಿರ್ಮಾಣವಾಗುವುದಿಲ್ಲ. ಕಾಯ್ದೆ–ಕಾನೂನುಗಳಿಂದ ಕಡಿವಾಣ ಹಾಕಬಹುದು. ಸಂಪೂರ್ಣ ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರು ಪಣ ತೊಡಬೇಕು ಅಂದಾಗ ಮಾತ್ರ ಯಶಸ್ಸು ಸಿಗಲಿದೆ ಎಂದು ಹೇಳಿದರು.

ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಅವರು ಮಾತನಾಡಿ, ವಿವಿಧ ಟಿವಿ ಮಾಧ್ಯಮ, ವ್ಯಾಟ್ಸಪ್ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾಗುವ ಜಾಹೀರಾತುಗಳಿಗೆ ಮರುಳಾಗಿ ಯುವ ಜನಾಂಗ ವಿವಿಧ ದುಶ್ಚಟಗಳಿಗೆ ಬಲಿಯಾಗುತ್ತಿದೆ. ಪ್ರಸ್ತುತ ವಿವಿಧ ಕಾನೂನು–ಕಾಯ್ದೆಗಳ ಅನುಷ್ಠಾನದಿಂದ ಇಂತಹ ಜಾಹೀರಾತುಗಳ ಕಡಿವಾಣವಾಗಿದ್ದು, ಆಯಾ ಹಂತಗಳಲ್ಲಿಯೇ ಇದನ್ನು ತಡೆಗಟ್ಟಬೇಕು. ದುಶ್ಚಟಗಳಿಗೆ ಬಲಿಯಾದವರು ಕೇವಲ ತಾವೊಬ್ಬರೇ ಬಲಿಯಾಗುವುದಿಲ್ಲದೇ ಇತರರಿಗೂ ಪರಿಣಾಮ ಬೀರಿದ ಅನೇಕ ಉದಾಹರಣೆಗಳಿವೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ–ಅರಿವು ಹೊಂದಬೇಕು. ವಿಶೇಷವಾಗಿ ಪಾಲಕರು ತಮ್ಮ ಮಕ್ಕಳ ಮೇಲೆ ನಿರಂತರವಾಗಿ ಗಮನ ಹರಿಸಿ ಯಾವುದೇ ದುಶ್ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.


ಪ್ರಾಸ್ತಾವಿಕವಾಗಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕವಿತಾ ಅವರು ಮಾತನಾಡಿ, ಪ್ರತಿ ವರ್ಷ ಮೇ.31 ರಂದು ವಿಶ್ವ ತಂಬಾಕು ರಹಿತ ದಿನವನ್ನಾಗಿ ಆಚರಿಸಲಾಗುತ್ತಿದೆ. ತಂಬಾಕು ಉತ್ಪನ್ನಗಳಿಂದ ಮಕ್ಕಳ ರಕ್ಷಣೆ ಕುರಿತು ವ್ಯಾಪಕವಾಗಿ ಪ್ರಚಾರ ಕೈಗೊಂಡು ಜಾಗೃತಿ ಮೂಡಿಸಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ತಂಬಾಕು ಸೇವನೆ ಹೆಚ್ಚಾಗುತ್ತಿರುವುದರಿಂದ ಇದಕ್ಕೆ ಕಡಿವಾಣ ಹಾಕಲು ವಿವಿಧ ಕಾಯ್ದೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಮಾಧ್ಯಮಗಳು ವ್ಯಾಪಕ ಪ್ರಚಾರ ಕೈಗೊಳ್ಳುವಂತೆ ಮನವಿ ಮಾಡಿಕೊಂಡ ಅವರು, ಜಿಲ್ಲೆಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವವರ ಮೇಲೆ ವಿವಿಧೆಡೆ ದಾಳಿ ನಡೆಸಿ 1.18 ಲಕ್ಷ ರೂ. ದಂಡ ಸಹ ವಿಧಿಸಲಾಗಿದೆ. ಈ ಕುರಿತು ವ್ಯಾಪಕವಾಗಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಉಪ ಆಯುಕ್ತ ಮಹಾವೀರ ಬೋರಣ್ಣವರ ಮಾತನಾಡಿದರು. ಡಾ.ರೂಪಶ್ರೀ ಅತಿಥಿ ಉಪನ್ಯಾಸ ನೀಡಿದರು. ಹಿರಿಯ ಸಿವ್ಹಿಲ್ ನ್ಯಾಯಾಧೀಶ, ಡಿಎಚ್‌ಓ ಡಾ.ಬಸವರಾಜ ಹುಬ್ಬಳ್ಳಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಶಿವಾನಂದ ಮಾಸ್ತಿಹೊಳಿ, ಪಾಲಿಕೆ ಮುಖ್ಯ ವೈದ್ಯಾಧಿಕಾರಿ ಡಾ.ಎಸ್.ಎಲ್.ಲಕ್ಕಣ್ಣವರ, ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ.ಜೈಬುನ್ನೀಸಾ ಬೀಳಗಿ, ಡಾ.ರಾಜೇಶ್ವರಿ ಗೊಲಗೇರಿ, ತಾಲೂಕಾ ಆರೋಗ್ಯಾಧಿಕಾರಿ ಪರಶುರಾಮ ಹಿಟ್ನಳ್ಳಿ, ಸಂಘ–ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಪೀಟರ್ ಅಲೆಕ್ಸಾಂಡರ್, ಜೈನರತ್ನ ಯುವಕ ಪರಿಷತ್‌ನ ವಿಜಯ ರುಣವಾಲ, ಕಾರ್ಯಕ್ರಮದ ಸಂಯೋಜಕ ಪ್ರಕಾಶ ಚವ್ಹಾಣ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಜಿ.ಎಂ.ಕೋಲೂರ ಸೇರಿದಂತೆ ಆರೋಗ್ಯ ಇಲಾಖೆ ವಿವಿಧ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಆರೋಗ್ಯ ಇಲಾಖೆಯ ಸುರೇಶ ಹೊಸಮನಿ ಕಾರ್ಯಕ್ರಮ ನಿರೂಪಿಸಿದರು.

# ಶಿಕ್ಷಣದಿಂದ ವಿದ್ಯಾರ್ಥಿಯ ಸರ್ವತೋಮುಖ ಅಭಿವೃದ್ಧಿ ಸಾಧ್ಯ

**ಉದಯರಶ್ಮಿ ನ್ಯೂಸ್**



ವಿಜಯಪುರ: ವಿದ್ಯಾರ್ಥಿಯ ಸರ್ವತೋಮುಖ ಅಭಿವೃದ್ಧಿ ಶಿಕ್ಷಣದಿಂದ ಮಾತ್ರ ಸಾಧ್ಯ ಎಂದು ಬಂಜಾರಾ ಪ್ರೌಢ ಶಾಲೆಯ ಮುಖ್ಯ ಗುರು ಇ.ಡಿ.ಲಮಾಣಿ ಹೇಳಿದರು.

ಶುಕ್ರವಾರದಂದು ಶಾಲಾ ಆರಂಭೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. ಶಿಕ್ಷಣ ಎಂದರೆ ಕೇವಲ ಪಠ್ಯಕ್ರಮದ ಅಧ್ಯಯನ ಪರೀಕ್ಷೆ, ಫಲಿತಾಂಶ ಮಾತ್ರವಲ್ಲ ಅದು ವಿದ್ಯಾರ್ಥಿಯ ಪರಿಪೂರ್ಣ ವ್ಯಕ್ತಿತ್ವದ ವಿಕಾಸ. ಅವನಲ್ಲಿ ಸುಪ್ತವಾಗಿರುವ ಅನನ್ಯ ಪ್ರತಿಭೆಯ ಅನಾವರಣ. ಹಾಗಾದಾಗ ಮಾತ್ರ ಶಿಕ್ಷಣಕ್ಕೆ ಒಂದು ಅರ್ಥಪೂರ್ಣತೆ ಬರುತ್ತದೆ ಎಂದು ಹೇಳಿದರು.

ಈ ವೇಳೆಯಲ್ಲಿ ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಎಂ.ಬಿ.ಪೂಜಾರಿಯವರು ಮಾತನಾಡುತ್ತ. ವಿದ್ಯೆ ಎಂಬುದು ಯಾರೂ ದೋಚಲಾಗದ, ಬಳಸದಷ್ಟು ಸಮೃದ್ಧವಾಗಿ ಬೆಳೆಯುವ, ಎಲ್ಲ ಸಂಪತ್ತಿಗಿಂತ ಮಿಗಿಲಾದದ್ದು. ಅದಕ್ಕಾಗಿ ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ. ಸಂಸ್ಕಾರ ನೀಡಿ ಮಕ್ಕಳ ಜ್ಞಾನ ಭಂಡಾರದ ಶ್ರೀಮಂತಿಕೆ ಹೆಚ್ಚಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್.ವ್ಹಿ.ದೇಶಪಾಂಡೆ, ಎ.ಎಂ.ನಾಗೊಂಡ, ಆರ್.ಎನ್.ಬಕಾಟೆ, ಜೆ.ಕೆ.ರಾಠೋಡ, ಎಸ್.ಡಿ.ಚವ್ಹಾಣ್, ಎಸ್.ಬಿ.ಒಡೆಯರ, ಎಸ್.ಕೆ.ಶಿಂಧೆ, ಎಸ್.ಪಿ.ಧಡೇಕರ, ಎಸ್.ಎಂ.ಮಾಳಿ, ಆರ್.ಎಸ್.ಹಿರೇಮಠ, ಪಿ.ಎಸ್.ಕೌಲಗಿ, ಆರ್.ಕೆ.ರಜಪೂತ, ಎಂ.ಎಲ್.ಚವ್ಹಾಣ್, ಡಿ.ಬಿ.ದೊಡಮನಿ, ಎಚ್.ಎಂ.ಬೋರಾವತ ಹಾಗೂ ಎಲ್ಲ ಶಿಕ್ಷಕ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಸಿಂದಗಿ: ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**



ಸಿಂದಗಿ: ಈ ಬಾರಿ ಶೈಕ್ಷಣಿಕ ಬಲವರ್ಧನೆ ಎಂಬ ಅಡಿಬರಹದಲ್ಲಿ ಮಕ್ಕಳಿಗೆ ಪಾಠವನ್ನು ಹೇಳಲಾಗುತ್ತಿದೆ ಎಂದು ಶಿಕ್ಷಣ ಸಂಯೋಜಕ ಆನಂದ ಮಾಡಗಿ ಹೇಳಿದರು.

ಪಟ್ಟಣದ ಬಸವ ನಗರದಲ್ಲಿರುವ ಸರಕಾರಿ ಕನ್ನಡ ಹೆಣ್ಣು ಮಕ್ಕಳ ಮಾದರಿ ಪ್ರಾಥಮಿಕ ಶಾಲೆ 2024–25ನೆಯ ಸಾಲಿನ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಶಾರದಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಅಧ್ಯಯನದಿಂದ ಯಾರು ಹಿಂದೆ ಉಳಿಯಬಾರದು. ಮಕ್ಕಳು ವಿದ್ಯಾಭ್ಯಾಸದೆಡೆಗೆ ಹೆಚ್ಚಿನ ಗಮನ ಹರಿಸಬೇಕು. ಆತ್ಮ ವಿಶ್ವಾಸವಿದ್ದರೆ ಯಾವುದೇ ಭಾಷೆ ಕಲಿಯನಹುದು ಎಂದು ಸಲಹೆ ನೀಡಿದರು.

ಈ ವೇಳೆ ಸಿಆರ್‌ಪಿ ನೀಲಕಂಠ ತಿಳಗೂಳ ಮಾತನಾಡಿ, ಸರಕಾರದ ಎಲ್ಲ ಯೋಜನೆಗಳನ್ನು ಬಳಸಿಕೊಂಡು ಉನ್ನತ ಸಾಧನೆ ಮಾಡಬೇಕು ಎಂದು ಹೇಳಿದರು.

ಶೈಕ್ಷಣಿಕ ವರ್ಷದ ಮೊದಲ ದಿನದಂದು ಆಗಮಿಸಿದ ವಿದ್ಯಾರ್ಥಿಗಳನ್ನು ಶಿಕ್ಷಕರು ಪ್ರೀತಿಯಿಂದ ಪುಷ್ಪಗುಚ್ಛ, ಪುಸ್ತಕ, ಪೆನ್ನು, ಹಣ್ಣಿನ ರಸ, ಸಿಹಿ ಪದಾರ್ಥ ನೀಡಿ ನೀಡಿ ಭವ್ಯವಾಗಿ ಸ್ವಾಗತಿಸಿಕೊಳ್ಳಲಾಯಿತು.

ಇದೇ ಸಂದರ್ಭದಲ್ಲಿ ಶಾಲೆಯ ಮುಖ್ಯಗುರು ಶರಣಬಸವ ಲಂಗೋಟಿ, ಆಯ್.ಎಮ್.ವಾಲೀಕಾರ, ಎ.ಕೆ.ಬಿರಾದಾರ ಸೇರಿದಂತೆ ಶಾಲೆಯ ಶಿಕ್ಷಕರು ಇದ್ದರು.

# ಸಂಭ್ರಮ, ಸಡಗರದಿಂದ ಶಾಲಾ ಪ್ರಾರಂಭೋತ್ಸವ

**ಉದಯರಶ್ಮಿ ನ್ಯೂಸ್**

**- ಬಸವರಾಜ ನಂದಿಹಾಳ**

ಬಸವನಬಾಗೇವಾಡಿ: ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಶೈಕ್ಷಣಿಕ ವರ್ಷದ ಶಾಲಾ ಚಟುವಟಿಕೆ, ಶಾಲಾ ಪ್ರಾರಂಭೋತ್ಸವ ಸಂಭ್ರಮ, ಸಡಗರದಿಂದ ಶುಕ್ರವಾರ ಆರಂಭವಾಯಿತು.

ಕಳೆದರೆಡು ದಿನಗಳಿಂದ ಶಾಲೆಗಳನ್ನು ಸ್ವಚ್ಛಗೊಳಿಸಿ ತಳಿರು–ತೋರಣ, ರಂಗವಲ್ಲಿ ಚಿತ್ತಾರ ಬಿಡಿಸಿ ಮಕ್ಕಳನ್ನು ಸ್ವಾಗತಿಸಿಕೊಳ್ಳಲು ಶಾಲೆಗಳನ್ನು ಶಿಕ್ಷಕ ಬಾಂಧವರು ಸಜ್ಜುಗೊಳಿಸಿದ್ದರು. ಕೆಲ ಶಾಲೆಗಳಲ್ಲಿ ತಳಿರು–ತೋರಣದ ಜೊತೆಗೆ ಬಲೂನುಗಳನ್ನು ಕಟ್ಟಲಾಗಿತ್ತು. ಕೆಲ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಹೂ ನೀಡಿ ಸ್ವಾಗತಿಸಿಕೊಳ್ಳಲಾಯಿತು. ಸರ್ಕಾರ ಶಾಲಾ ಪ್ರಾರಂಭೋತ್ಸವಕ್ಕೆ ಸಾಕಷ್ಟು ಸಿದ್ಧತೆ ಮಾಡಿಕೊಳ್ಳಲು ಸೂಚಿಸಿದರೂ ಬಹುತೇಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ ಅಷ್ಟಾಗಿ ಕಂಡುಬರಲಿಲ್ಲ. ಕೆಲ ಶಾಲೆಗಳಲ್ಲಿಯಂತೂ ವಿದ್ಯಾರ್ಥಿಗಳು ಬೆರಳಣಿಕೆಯಷ್ಟು ಇರುವುದು ಕಂಡುಬಂದಿತ್ತು. ಶಿಕ್ಷಕ ಬಾಂಧವರು ಶಾಲೆಗೆ ಹಾಜರಾದ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ ವಿತರಿಸಿದರು. ಮಧ್ಯಾನ್ಹ ಸರ್ಕಾರದ ಆದೇಶದಂತೆ ಬಿಸಿಯೂಟದಲ್ಲಿ ಸಿಹಿಯೂಟ ವ್ಯವಸ್ಥೆ ಮಾಡಲಾಗಿತ್ತು.

ಅಖಂಡ ಬಸವನಬಾಗೇವಾಡಿ ತಾಲೂಕಿನಲ್ಲಿ ಸರ್ಕಾರಿ 108 ಕಿರಿಯ ಪ್ರಾಥಮಿಕ ಶಾಲೆ, 181 ಹಿರಿಯ ಪ್ರಾಥಮಿಕ ಶಾಲೆ, 26 ಪ್ರೌಢಶಾಲೆಗಳಿವೆ. ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ 1240 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. 333 ಹುದ್ದೆಗಳು ಖಾಲಿ ಇವೆ. ಸರ್ಕಾರಿ ಪ್ರೌಢಶಾಲೆಯಲ್ಲಿ 245 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. 43 ಹುದ್ದೆಗಳು ಖಾಲಿ ಇವೆ. 114 ಅನುದಾನ ರಹಿತ ಪ್ರಾಥಮಿಕ ಶಾಲೆ,16 ಅನುದಾನರಹಿತ ಪ್ರೌಢಶಾಲೆ, 18 ಅನುದಾನಿತ ಪ್ರಾಥಮಿಕ ಶಾಲೆ, 39 ಅನುದಾನಿತ ಪ್ರೌಢಶಾಲೆಗಳಿವೆ. ಈಗಾಗಲೇ 018 ಕ್ಲಸ್ಟರ್ಗಳಲ್ಲಿ ಸಮವಸ್ತ್ರವನ್ನು ವಿತರಣೆ ಮಾಡಲಾಗಿದೆ. ಉಳಿದ ಕ್ಲಸ್ಟರ್ಗಳಿಗೆ ವಿತರಣೆ ಮಾಡಲಾಗುತ್ತಿದೆ. ಕಳೆದ ವರ್ಷದಲ್ಲಿ 76,579 ಮಕ್ಕಳ ದಾಖಲಾತಿಯಾಗಿತ್ತು. ಈ ವರ್ಷ 78,000 ಮಕ್ಕಳ ದಾಖಲಾತಿ ಗುರಿ ಇಟ್ಟುಕೊಳ್ಳಲಾಗಿದೆ. ಈ ವರ್ಷ 15 ಶಾಲಾ ಕೋಣೆಗಳ ರಿಪೇರಿ ಮಾಡಲಾಗಿದೆ. 120 ಶಾಲಾ ಕೋಣೆಗಳ ಕೊರತೆಯಿದೆ. ಇದುವರೆಗೂ 44,528 ಉಚಿತ ಪಠ್ಯಪುಸ್ತಕ, 25,318 ಮಾರಾಟ ಪಠ್ಯಪುಸ್ತಕಗಳು ವಿತರಣೆಯಾಗಿವೆ ಎಂದು ಬಿಇಓ ವಸಂತ ರಾಠೋಡ ಮಾಹಿತಿ ನೀಡಿದರು.

ಎಲ್ಲ ಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳು ಆರಂಭಗೊಳ್ಳುವ ಮೂಲಕ ವಿದ್ಯಾರ್ಥಿಗಳನ್ನು ಶಾಲೆಗೆ ಸ್ವಾಗತಿಸಿಕೊಳ್ಳಲಾಯಿತು. ಎಲ್ಲ ಶಾಲೆಗಳಲ್ಲಿ ದಾಖಲಾತಿ ಆರಂಭವಾಗಿದೆ. ಬೇಸಿಗೆ ರಜೆ



ಕಳೆದ ವಿದ್ಯಾರ್ಥಿಗಳು ಉತ್ಸಾಹದಿಂದ ಶಾಲೆಗೆ ಹೋಗಲು ಸಿದ್ಧವಾಗುತ್ತಿದ್ದಾರೆ.

ತಾಲೂಕಿನ ಯಂಭತ್ನಾಳ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಹಾಜರಾದ ವಿದ್ಯಾರ್ಥಿಗಳಿಗೆ ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ ಪಠ್ಯಪುಸ್ತಕ, ಸಮವಸ್ತ್ರ ವಿತರಿಸಿದರು. ನಂತರ ಮಾತನಾಡಿದ ಅವರು, ವಿದ್ಯಾರ್ಥಿಗಳು ಶಿಸ್ತು ಮೈಗೂಡಿಸಿಕೊಂಡು ಶಾಲಾ ಆವರಣ ಸ್ವಚ್ಛತೆಯಿಂದ ಇಟ್ಟುಕೊಳ್ಳುವ ಕಡೆಗೆ ಗಮನ ಹರಿಸಬೇಕು. ಶಿಕ್ಷಕರು ಹೇಳುವ ಪಾಠಗಳನ್ನು ಸರಿಯಾಗಿ ಆಲಿಸಿ ತಮಗೆ ಉಂಟಾದ ಸಮಸ್ಯೆಗಳನ್ನು ಪರಿಹಾರ ಮಾಡಿಕೊಂಡು ನಿರಂತರ ಅಧ್ಯಯನಶೀಲರಾಗಿ ಉತ್ತಮ ವಿದ್ಯಾರ್ಥಿಗಳಾಗಿ ಹೊರಹೊಮ್ಮಬೇಕೆಂದರು. ಈ ಸಂದರ್ಭದಲ್ಲಿ ಡೋಣೂರ ಸಿಆರ್ಪಿ ಎಚ್.ಎಸ್.ಡೋಮನಾಳ, ಶಾಲೆಯ ಮುಖ್ಯಗುರು ಎನ್.ಎಸ್.ಸಜ್ಜನ, ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಎಸ್.ಎಸ್.ಮಂಗಾನವರ, ಎಸ್ಡಿಎಂಸಿ ಅಧ್ಯಕ್ಷ ನಿಂಗೊಂಡ ಹೊಸಮನಿ, ಉಪಾಧ್ಯಕ್ಷೆ ಪಾರ್ವತಿ ವಾಲೀಕಾರ, ಸದಸ್ಯರಾದ ಅಮರನಾಥ ಕುಮಟಗಿ, ಸಾಹೇಬಣ್ಣ ನಂದಿಹಾಳ, ಶ್ರೀಶೈಲ ಹಡಪದ, ನಿಂಗನಗೌಡ ಪಾಟೀಲ, ಬೌರಮ್ಮ ಬಳಗಾನೂರ ಇತರರು ಇದ್ದರು.

ತಾಲೂಕಿನ ಡೋಣೂರ ಗ್ರಾಮದ ಆಶ್ರಯ ಕಾಲೋನಿಯಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೂ ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ ಭೇಟಿ ನೀಡಿ ಅಲ್ಲಿ ನಡೆದ ಶಾಲಾ ಪ್ರಾರಂಭೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ ವಿತರಿಸಿದರು. ಈ ಶಾಲೆಗೆ ಮೂರು ಶಾಲಾ ಕೋಣೆಗಳು ಅಗತ್ಯವಿರುವ ಬೇಡಿಕೆಯನ್ನು ಬಿಇಓ ಅವರ ಗಮನಕ್ಕೆ ತರಲಾಯಿತು. ಶಾಲೆಯ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಅಗತ್ಯವಿರುವ ಶೌಚಾಲಯ ನಿರ್ಮಾಣಕ್ಕಾಗಿ ಕೂಡಲೇ ಡೋಣೂರ ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯಿತಿಗೆ ಅರ್ಜಿ, ಶಾಲೆಗೆ ಇರುವ ಎರಡು ಎಕರೆ ಆಟದ ಮೈದಾನದಲ್ಲಿ ಜಾಲಿ ಕಂಟಿ ಬೆಳೆದಿದ್ದು. ಇದರ ಸ್ವಚ್ಛತೆಗೆ ಗ್ರಾಮ ಪಂಚಾಯಿತಿಗೆ ಅರ್ಜಿ ಕೊಟ್ಟು ಕೂಡಲೇ ಮೈದಾನ ಸ್ವಚ್ಛತೆಗೆ ಕ್ರಮ ತೆಗೆದುಕೊಳ್ಳಬೇಕೆಂದು ಮುಖ್ಯಗುರುಗಳಿಗೆ ಬಿಇಓ ಸೂಚಿಸಿದರು. ಶಾಲೆಗೆ ಬಿಸಿಯೂಟದ ಸಿಬ್ಬಂದಿ ನೇಮಕ, ಬಿಸಿಯೂಟದ ಪಾತ್ರೆ ಪರಿಕರ ಖರೀದಿಗೆ ಅನುಮತಿ ನೀಡಿ ಕೂಡಲೇ ಶಾಲೆಯಲ್ಲಿ ಬಿಸಿಯೂಟ ಆರಂಭಿಸಬೇಕೆಂದು ಬಿಇಓ ಹೇಳಿದರು.

ಈ ಸಂದರ್ಭದಲ್ಲಿ ಸಿಆರ್ಪಿ ಎಚ್.ಎಸ್.ಡೋಮನಾಳ, ಮುಖ್ಯಗುರು ಎಸ್.ಬಿ.ಗುಬ್ಬಿ ಇತರರು ಇದ್ದರು.

ಸರ್ಕಾರ ಶಾಲೆಗಳಲ್ಲಿ ಹಾಜರಾತಿ ಹೆಚ್ಚಳ ಮಾಡಲು ಮತ್ತು ಗುಣಮಟ್ಟದ ಕಲಿಕೆ ಒದಗಿಸುವ ಉದ್ದೇಶದಿಂದ ಶಾಲೆ ಆರಂಭ ದಿನದಂದೆ ಉಚಿತ ಪಠ್ಯಪುಸ್ತಕ, ಸಮವಸ ವಿತರಣೆ ಮಾಡುವ ಕ್ರಮ ತೆಗೆದುಕೊಂಡಿದೆ. ಸರ್ಕಾರದ ಆಶಯದಂತೆ ಇಂದು ಎಲ್ಲ ಶಾಲೆಗಳಲ್ಲಿ ಹಾಜರಾದ ಎಲ್ಲ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ ಅಖಂಡ ತಾಲೂಕಿನಲ್ಲಿ ವಿತರಿಸಲಾಗಿದೆ. ಉಳಿದ ವಿದ್ಯಾರ್ಥಿಗಳಿಗೂ ಅವರು ಶಾಲೆಗೆ ಹಾಜರಾದ ದಿನದಂದು ವಿತರಣೆ ಮಾಡಲಾಗುವುದು. ಎಲ್ಲ ಶಾಲೆಗಳಲ್ಲಿ ಶಾಲಾ ಪ್ರಾರಂಭೋತ್ಸವ ಸಂಭ್ರಮದಿಂದ ಜರುಗಿತು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ ಪತ್ರಿಕೆಗೆ ಮಾಹಿತಿ ನೀಡಿದರು.

# ಅಹಿಲ್ಯಾಬಾಯಿ ಹೋಳ್ಕರ ಜಯಂತ್ಯುತ್ಸವ

**ಉದಯರಶ್ಮಿ ನ್ಯೂಸ್**



ವಿಜಯಪುರ: ರಾಜ ಮಾತಾ ಅಹಿಲ್ಯಾಬಾಯಿ ಹೋಳ್ಕರ ಜಯಂತಿ ಅಂಗವಾಗಿ ಶುಕ್ರವಾರ ನಗರದ ಎಪಿಎಂಸಿ ಬಳಿಯ ರಾಜಮಾತಾ ಅಹಿಲ್ಯಾಬಾಯಿ ಹೊಳ್ಕರ ವೃತ್ತದಲ್ಲಿರುವ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಕಣಾಪುರ ಗುರು ಪೀಠದ ಸೋಮೇಶ್ವರ ಮಹಾರಾಜ್, ಮೇಲಗಿರೇಶ್ವರ ಗದ್ದುಗೆ ಶ್ರೀಗಳಾದ ಭೀಮಶಿ ಬಳಗಾನೂರ, ಮಹಾನಗರ ಪಾಲಿಕೆ ಸದಸ್ಯರಾದ ಎಂ.ಎಸ್.ಕರಡಿ, ಜವಾಹಾರ ಗೋಸಾವಿ, ರಾಜಶೇಖರ ಮಗಿಮಠ, ರಾಜಶೇಖರ ಕುರಿಯುವರ, ವಿಠ್ಠಲ ಹೊಸಪೇಟೆ, ಪ್ರೇಮಾನಂದ ಬಿರಾದಾರ, ಮಳುಗೌಡ ಬಿರಾದಾರ, ವಿವಿಧ ಸಮಾಜದ ಮುಖಂಡರಾದ ಅಶೋಕ ಬೆಲ್ಲದ, ಯಲಗೊಂಡ ಬಾಗಾದಿ, ರಮೇಶ ಪಡಸಲಗಿ, ಬಸವರಾಜ ಗೊಳಸಂಗಿ, ಕಾಂತು ಸಿಂಧೆ, ಬಾಬು ಶಿರಶ್ಯಾಡ, ವಿಕ್ರಮ ಗಾಯಕವಾಡ, ಬಸವರಾಜ ಲವಗಿ, ಅಮೋಗಿ ಕರಂಡೇ, ಕರೆಪ್ಪ ಬಸ್ತಾಳ, ಹಣಮಂತ ಬಿದರಿ, ವಿಠ್ಠಲ ಶಿವಣಗಿ, ಶಂಕರ ಹೂಗಾರ, ಪರಶು ತಳೇವಾಡ, ಭೀಮು ಮಳೆಪ್ಪನವರ, ಪ್ರಕಾಶ ಚವ್ಹಾಣ, ಜಗದೀಶ ಶಿಂಗಾಡಿ ಇದ್ದರು.

# ಆಲಮೇಲ: ಯೋಗ ಶಿಬಿರದ ಜಾಗೃತಿಗಾಗಿ ಪ್ರಭಾತಪೇರಿ

**ಉದಯರಶ್ಮಿ ನ್ಯೂಸ್**

ಆಲಮೇಲ: ಪಟ್ಟಣದಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ಯ ಆಲಮೇಲದ ಯೋಗೋತ್ಸವ ಸಮಿತಿ ಸಹಯೋಗದೊಂದಿಗೆ 21 ದಿನಗಳ ಕಾಲ ಉಚಿತ ಯೋಗ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಅದರ ಜಾಗೃತಿಗಾಗಿ ಶುಕ್ರವಾರ ಬೆಳಗ್ಗೆ ಪಟ್ಟಣದೆಲ್ಲೆಡೆ ಪಾದಯಾತ್ರೆ ಮೂಲಕ ಪ್ರಭಾತ ಪೇರಿ ಹಮ್ಮಿಕೊಂಡು ಮನೆ ಮನೆಗೆ ತರಳಿ ಯೋಗ ಶಿಬಿರದಲ್ಲಿ ಪಾಲ್ಗೊಳ್ಳಲು ಮನವಿ ಮಾಡಿದರು.



ಆಲಮೇಲ ಪಟ್ಟಣದ ಸಿಂದಗಿ ರಸ್ತೆಯ ಯುಕೆಪಿ ಕ್ಯಾಂಪಿನಲ್ಲಿ ಜೂನ್ 2 ರಂದು ಬಾನುವಾರ ಬೆಳಗ್ಗೆ 5:30 ಗಟೆಗೆ ಯೋಗೋತ್ಸವ ಪ್ರಾರಂಬಗೊಳ್ಳಲಿದೆ ನಿರಂತರವಾಗಿ 21 ದಿನಗಳ ಕಾಲ ನಡೆಯಲಿದೆ. ಮತ್ತು ಸಾಯಂಕಾಲ 7 ಗಂಟೆಯಿಂದ 8 ಗಂಟೆವರೆಗೆ ಭಜನೆ ಮತ್ತು ಆದ್ಯಾತ್ಮಿಕ ಪ್ರವಚನ ನಡೆಯಲಿದೆ.

ಈ ಕಾರ್ಯಕ್ರಮವನ್ನು ಹಿಮಾಲಯದ ಯೋಗ ಸಾಧನೆ ಮಾಡಿರುವ ಯೋಗ ಗುರು ಪರಮ ಪೂಜ್ಯ ನಿರಂಜನ ಶ್ರೀಗಳು ನಡೆಸಿಕೊಡಲಿದ್ದಾರೆ.

ಅಳ್ಳೊಳಿಮಠದ ಶ್ರೀಶೈಲಯ್ಯಮಹಾಸ್ವಾಮಿ, ನಿತ್ಯಾನಂದ ಆರೂಢ ಮಠದ ಬಸವಲಿಂಗ ಶರಣರು, ಯೋಗೋತ್ಸವ ಸಮಿತಿಯ ಮುಖಂಡರಾದ ಡಾ। ಶ್ರೀಶೈಲ ಪಾಟೀಲ, ಕಸಾಪ ಅಧ್ಯಕ್ಷ ಶಿವಶರಣ ಗುಂದಗಿ, ಶ್ರೀಶೈಲ ಮಠಪತಿ, ನಿವೃತ ಪ್ರಾಚಾಯ್ ಎನ್.ಎ. ಬಿರಾದಾರ. ಡಾ। ರಾಜೇಶ ಪಾಟೀಲ, ಡಾ। ಸಂಜೆಯ ಪಾಟೀಲ, ಡಾ। ಪವನ ಜ್ಯೋಶಿ, ಡಾ। ಚನ್ನಬಸು ನಿಂಬಾಳ, ಶೇಷಾದ್ರಿ ಜೋಶಿ, ಅಶೋಕ ಸದ್ಲಾಪೂರ, ಭಾಗಣ್ಣ ಗುರಕಾರ, ಸಂತೋಷ ಅಮರಗೊಂಡ, ಸುನಿಲ ನಾರಯಣಕರ, ದೇವಪ್ಪ ಗುಣಾರಿ, ಶಂಕರ ಹಳೆಮನಿ, ರವಿ ವಾರದ, ಜಿ.ಸಿ. ಪಶುಪತಿಮಠ, ಬಾಬು ಕೆಳಗಿನಮನಿ, ಗುಂಡು ಮೇಲಿಮನಿ, ಚಂದ್ರಶೇಕರ ಕೆಳಗಿನಮನಿ, ರಾಜೇಂದ್ರ ರಾಠೋಡ ಮುಂತಾದವರು ಇದ್ದರು.

# ಬಸವೇಶ್ವರ ಪುತ್ಥಳಿ ಸ್ಥಾಪನೆಗೆ ತಹಸೀಲ್ದಾರರಿಂದ ಸ್ಥಳ ಪರಿಶೀಲನೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಇಂಗಳೇಶ್ವರ ಗ್ರಾಮದ ಬಸ್ ನಿಲ್ದಾಣ ಆವರಣದಲ್ಲಿ ಅಶ್ವಾರೂಢ ಬಸವೇಶ್ವರರ ಪುತ್ಥಳಿ ಸ್ಥಾಪನೆ ಮಾಡುವ ಉದ್ದೇಶದಿಂದ ಜಿಲ್ಲಾಧಿಕಾರಿಗಳ ಆದೇಶ ಮೇರೆಗೆ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಶುಕ್ರವಾರ ಸ್ಥಳ ಪರಿಶೀಲನೆ ಮಾಡಿದರು.

ಸ್ಥಳ ಪರಿಶೀಲನೆ ಮಾಡಿದ ನಂತರ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಮಾತನಾಡಿ, ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ಗ್ರಾಮದಲ್ಲಿ ಬಸವೇಶ್ವರ ಪುತ್ಥಳಿ ಸ್ಥಾಪನೆಗೆ ಸ್ಥಳ ಪರಿಶೀಲನೆ ಮಾಡಲು ಬಂದಿದ್ದು. ಜೂ.6 ರ ನಂತರ ಜಿಲ್ಲಾ□ಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಅವರು ಪರಿಶೀಲನೆ ಮಾಡಿ ಮುಂದಿನ ಕ್ರಮ ಕೈಗೊಳ್ಳುತ್ತಾರೆ ಎಂದರು.

ಈ ಸಂದರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ಹಿಂದಿನ ಸರ್ಕಾರ ಅವಧಿಯಲ್ಲಿ ನಮ್ಮ ಮನವಿಗೆ ಸ್ಪಂದಿಸಿ ಇಂಗಳೇಶ್ವರ ಗ್ರಾಮದ ಅಭಿವೃದ್ಧಿಗಾಗಿ 5 ಕೋಟಿ ಅನುದಾನ ಬಿಡುಗಡೆಯಾಗಿದೆ. ಈಗಾಗಲೇ ಬಸವೇಶ್ವರ ಪಂಚ ಲೋಹದ ಪುತ್ಥಳಿ ಸ್ಥಾಪನೆ 1.36 ಕೋಟಿ ಅಂದಾಜು ವೆಚ್ಚ ಮಾಡಲಾಗಿದೆ. ಉತ್ತಮ ರೀತಿಯಿಂದ ಬಸವೇಶ್ವರರ ಪುತ್ಥಳಿ ತಯಾರಿಸಿ ಸುತ್ತಲೂ ಉದ್ಯಾನವನ, ಕಾರಂಜಿ, ವಿದ್ಯುತ್ ದೀಪಗಳ ವ್ಯವಸ್ಥೆ ಹಾಗೂ ಸಿದ್ದೇಶ್ವರ ದೇವಸ್ಥಾನದ ಬಸವನಬಾಗೇವಾಡಿ ರಸ್ತೆಯಿಂದ ಡಿವೈಡರ್ ರಸ್ತೆ ಮಧ್ಯದಲ್ಲಿ ವಿದ್ಯುತ್ ಕಂಬಗಳನ್ನು ಮಾದಲಾಂಬಿಕೆ ಸ್ಮಾರಕದವರೆಗೆ ಅಳವಡಿಸಬೇಕೆಂದು ಮನವಿ ಮಾಡಿಕೊಂಡರು.



ಈ ಸಂದರ್ಭದಲ್ಲಿ ಗ್ರಾಮಾಡಳಿಧಿಕಾರಿ ಸಂತೋಷ ಕುಂಟೋಜಿ, ಗ್ರಾಮ ಪಂಚಾಯತ ಅಧ್ಯಕ್ಷ ಬನ್ನೆಪ್ಪ ಡೋಣೂರ, ಶ್ರೀಶೈಲ ತಾಳಿಕೋಟಿ, ರೇವಣಸಿದ್ದ ದಳವಾಯಿ, ಶ್ರೀಶೈಲ ಚಾಂದಕವಟೆ, ಶಿವಾನಂದ ನಡಕಟ್ಟಿ, ಮಲ್ಲಪ್ಪ ತಕ್ಕೋಡ, ಚನ್ನಬಸಪ್ಪ ಸಿಂಧೂರ, ಭೀಮಪ್ಪ ಡಿಗ್ಗಾವಿ, ಶಂಕ್ರೆಪ್ಪ ಪೂಜಾರಿ, ಸಂಗಪ್ಪ ದಳವಾಯಿ, ಮಲ್ಲಪ್ಪ ಬಮ್ಮಣಗಿ, ಮುತ್ತಪ್ಪ ಬಡಿಗೇರ, ನಾಗಣ್ಣ ಚಿಗರಿ ಇತರರು ಇದ್ದರು.

# ನಂದಿಹಾಳ: ಗುಲಾಬಿ ಹೂ ನೀಡಿ ವಿದ್ಯಾರ್ಥಿಗಳಿಗೆ ಸ್ವಾಗತ

**ಉದಯರಶ್ಮಿ ನ್ಯೂಸ್**

ಬಸವವಬಾಗೇವಾಡಿ: ತಾಲೂಕಿನ ನಂದಿಹಾಳ ಗ್ರಾಮ ಎಂಪಿಎಸ್ ಶಾಲೆಯಲ್ಲಿ ಶುಕ್ರವಾರ ಶಾಲಾ ಪ್ರಾರಂಭೋತ್ಸವ ಹಾಗೂ ದಾಖಲಾತಿ ಆಂದೋಲನದ ಸಮಾರಂಭ ಸಂಭ್ರಮ, ಸಡಗರದಿಂದ ಜರುಗಿತು.



ಎಸ್ಡಿಎಂಸಿ ಅಧ್ಯಕ್ಷ ಸುರೇಶ ಗ್ರಾಮ ಪಂಚಾಯಿತಿ ಸದಸ್ಯ ಅಪ್ಪು ಹಾದಿಮನಿ, ಮುಖ್ಯಗುರು ಡಿ. ಎನ್. ಸಂಗಳದ ಸರಸ್ವತಿ ದೇವಿ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿದರು.ಈ ಸಂದರ್ಭದಲ್ಲಿ ಎಸ್ಡಿಎಂಸಿ ಸದಸ್ಯರಾದ ವಿಶ್ವನಾಥ ಮನಗೂಳಿ, ಶಂಕರ ಮನಗೂಳಿ , ಶಿವಪ್ಪ ಕುಮಶಿ,,ಹಣಮಂತ ಕರಡಿ,ರಮೇಶ ಬೆಂಕಿ, ಮುತ್ತು ಸಾರವಾಡ, ಆಸೀಪ್ ಮುಲ್ಲಾ, ಶಾಲೆಯ ಶಿಕ್ಷಕರಾದ ಪ್ರೇಮಲತಾ, ಸಂಗು ನಾಗರಾಳ, ರಮೇಶ ಕುದರಿ, ಶಿವು ಮಡಿಕೇಶ್ವರ,ಬಸವರಾಜ ಬಾಗೇವಾಡಿ, ವೈ. ಬಿ. ಬಾಗೇವಾಡಿ, ಉರ್ದು ಶಾಲೆಯ ಮುಖ್ಯಗುರು ಐ.ಆರ್. ಮಕಾನದಾರ, ಕನ್ನಡ ಶಿಕ್ಷಕ ಸಿ. ಎನ್. ಗಟೇಕಾರ ಪಾಲಕ ಪೋಷಕರು, ಮಕ್ಕಳು ಹಾಜರಿದ್ದರು. ಮಕ್ಕಳಿಗೆ ಸಿಹಿ ಹಂಚಿ ಗುಲಾಬಿ ಹೂ ನೀಡಿ ಶಾಲೆಗೆ ಮಕ್ಕಳನ್ನು ಸ್ವಾಗತಿಸಿಲಾಯಿತು.

**ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಅವರಿಗೆ ಮನವಿ ಸಲ್ಲಿಸಿದ ಕಾನಿಪ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ**

# ಪತ್ರಕರ್ತನ ಮೇಲೆ ನಡೆದ ಪೊಲೀಸರ ದೌರ್ಜನ್ಯ ಖಂಡಿಸಿದ ತಗಡೂರ

**ಉದಯರಶ್ಮಿ ನ್ಯೂಸ್**

ಸಿಂದಗಿ: ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ವರದಿಗಾರ ಕಾನಿಪ ಸಂಘದ ಸದಸ್ಯ ಗುಂಡು ಕುಲಕರ್ಣಿ ಅವರು ಅಕ್ರಮ ಮರಳು ದಂದೆ ಕುರಿತು ವರದಿ ಮಾಡಿದ ಹಿನ್ನೆಲೆ ಪೊಲೀಸರಿಂದ ನಡೆದ ದೌರ್ಜನ್ಯ ವಿರೋಧಿಸಿ ತಪ್ಪಿತಸ್ಥರ ಮೇಲೆ ಸೂಕ್ತ ಕ್ರಮಕ್ಕೆ ಆಗ್ರಹಿಸಿ ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.



ಮನವಿ ಸ್ವೀಕರಿಸಿದ ಸಿಎಂ ಮಾಧ್ಯಮ ಸಲಹೆಗಾರರು ವಿಜಯಪುರ ಎಸ್ಪಿ ಅವರಿಗೆ ಕರೆ ಮಾಡಿ ಇಂತಹ ಘಟನೆಗಳು ಆಗದಂತೆ ನೋಡಿಕೊಳ್ಳಿ. ಪತ್ರಕರ್ತರ ಸ್ಥಿತಿಯೇ ಹೀಗಾದರೆ ಹೇಗೆ ಅದನ್ನು ಪರಿಶೀಲನೆ ಮಾಡಿ ಸಂಬಧಿಸಿದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮಕೈಗೊಳ್ಳಿ. ಸರಕಾರಕ್ಕೆ ಕೆಟ್ಟ ಹೆಸರು ಬರದ ಹಾಗೇ ನೋಡಿಕೊಳ್ಳಿ ಎಂದರು.

ಇದೇ ಸಂದರ್ಭದಲ್ಲಿ ಗುಂಡು ಕುಲಕರ್ಣಿ, ಗುರುರಾಜ ಮಠ ಸೇರಿದಂತೆ ಅನೇಕರಿದ್ದರು.

# ಮನಗೂಳಿ: ಜೂ.1ರಿಂದ ಪುಣ್ಯಸ್ಮರಣೆ & ಜಾತ್ರಾಮಹೋತ್ಸವ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಪಟ್ಟಣದ ಹಿರೇಮಠದಲ್ಲಿ ಶತಾಯುಷಿ ಲಿಂ. ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯುವರ 41 ನೇ ಪುಣ್ಯಸ್ಮರಣೋತ್ಸವ ಹಾಗೂ ಲಿಂ. 2008 ಜಗದ್ಗುರು ಡಾ.ಮಹಾಂತ ಶಿವಾಚಾರ್ಯ ಸ್ವಾಮೀಜಿಯವರ 11 ನೇ ಜಾತ್ರಾಮಹೋತ್ಸವದಂಗವಾಗಿ ಜೂ. 1,2 ಎರಡು ದಿನಗಳ ಕಾಲ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಜೂ. 1 ರಂದು ಬೆಳಗ್ಗೆ 6.20 ಗಂಟೆಗೆ ಪಂಚಾಚಾರ್ಯ ಧ್ವಜಾರೋಹಣ, 6.30 ಗಂಟೆಗೆ ಸಾಮೂಹಿಕ ಶಿವದೀಕ್ಷೆ ಕಾರ್ಯಕ್ರಮ ಜರುಗಲಿದೆ. ರಾತ್ರಿ 10 ಗಂಟೆಗೆ ಮನಗೂಳಿ, ಕುಬಕಡ್ಡಿ, ಹತ್ತರಕಿಹಾಳ, ನಂದಿಹಾಳ ಪಿಯು, ವಿಜಯಪುರ ಅಡಿಕೆ ಗಲ್ಲಿ ಹಾಗೂ ಬಬಲೇಶ್ವರ ಭಜನಾ ಮಂಡಳಿ ಅವರಿಂದ ಭಜನಾ ಕಾರ್ಯಕ್ರಮ ನಡೆಯಲಿದೆ.




ಜೂ. 2 ರಂದು ಬೆಳಗ್ಗೆ 7 ಗಂಟೆಗೆ ಬಸಪ್ಪ ಹುಣಶಿಕಟ್ಟಿ ಅವರ ತೋಟದಿಂದ ವಿವಿಧ ವಾದ್ಯಮೇಳದೊಂದಿಗೆ ಕುಂಭ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀಮಠಕ್ಕೆ ಆಗಮಿಸುವದು. ನಂತರ 8 ಗಂಟೆಗೆ ಉಭಯ ಶ್ರೀಗಳ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ ನಿಂಗನಗೌಡ ಪಾಟೀಲ, ಶಿವಪ್ಪ ಅನಗವಾಡಿ, ಬಸವರಾಜ ಸಣ–ಕಲ್ ಹಾಗೂ ಮನಗೂಳಿ ವೈದಿಕರಿಂದ ನಡೆಯಲಿದೆ. 9 ಗಂಟೆಗೆ ಉಭಯ ಶ್ರೀಗಳ ರಜ–ತ ಮೂರ್ತಿಗಳ ಪಲ್ಲಕ್ಕಿ ಉತ್ಸವ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯಮೇಳದೊಂದಿಗೆ ಸಂಚರಿಸಿ ಶ್ರೀಮಠಕ್ಕೆ ಆಗಮಿಸುವದು. ಮಧ್ಯಾನ್ಹ 12.30 ಗಂಟೆಗೆ ಧರ್ಮಸಭೆ ನಡೆಯಲಿದೆ. ಈ ಎಲ್ಲ ಕಾರ್ಯಕ್ರಮಗಳಿಗೆ ಸದ್ಭಕ್ತರು ಆಗಮಿಸಿ ಗುರುಕೃಪೆಗೆ ಪಾತ್ರರಾಗಬೇಕೆಂದು ಶ್ರೀಮಠದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾವ್ಯರಶ್ಮಿ

– ಶಾರದಾ ಗುಂಡೂರಾವ್
("ನಮ್ಮ ಕಥಾ ಅರಮನೆ" ಬರಹಗಾರರು)



### ನಕ್ಷತ್ರ

ಓ
ನನ್ನಯ
ಕಥಾ ಅರಮನೆ
ಸರ್ವ ಸದಸ್ಯರೆಲ್ಲರಿಗೂ
ಬಳಗದೆಲ್ಲರೂ ಸರ್ವ ಸದಸ್ಯರಿಗಾಗಿ
ಕೊಡುವ ಥೀಮ್, ಬರೆಯಲು ಕೊಡುವ ಕಥೆಕವನ

ದಿಂದ ಪ್ರತಿ ಸದಸ್ಯರ ಜ್ಞಾನ ವೃದ್ಧಿಗಾಗಿ
ಪಡುತ್ತಿರುವ ಶ್ರಮಕ್ಕಾಗಿ
ನಿಜಕ್ಕೂ ಆಭಾರಿ
ಮುಗಿವೆ
ಕೈ



# ಅನುತ್ತೀರ್ಣರಾದ ಮಕ್ಕಳಿಗೆ ಭರವಸೆಯ ಅಗತ್ಯ

## ಭಾವರಶ್ಮಿ



– ನಟರಾಜ ಬೂಸದ್
("ನಮ್ಮ ಕಥಾ ಅರಮನೆ" ಬರಹಗಾರರು)
ಉದಯರಶ್ಮಿ ದಿನಪತ್ರಿಕೆ

ಅನುತ್ತೀರ್ಣರಾದ ಮಕ್ಕಳ ಶೈಕ್ಷಣಿಕ ಬೆಳವಣಿಗಾಗಿ ಪೋಷಕರು ಶಿಕ್ಷಣದ ಪ್ರಕ್ರಿಯೆಯಲ್ಲಿ ಸರಿಯಾದ ನಿರ್ಧಾರ ತೆಗೆದುಕೊಳ್ಳದಿದ್ದರೆ ತಮ್ಮ ಮಕ್ಕಳ ಜೀವನವನ್ನು ತಮ್ಮ ಕೈಯಿಂದಲೇ ಹಾಳು ಮಾಡಿದಂತೆ ಆಗುವುದರಲ್ಲಿ ಸಂದೇಹವೇ ಇಲ್ಲ.

ನಾವು ಸಣ್ಣವರಿದ್ದಾಗ ಈಗಿನಂತೆ ಶಿಕ್ಷಣದಲ್ಲಿ ಸ್ಪರ್ಧಾತ್ಮಕ ಭಾವನೆ ಇರಲಿಲ್ಲ ಆದರೆ ಶಿಕ್ಷಣದಲ್ಲಿ ಇಂದು ನೂರು ಶತಮಾನ ಸ್ಪರ್ಧಾತ್ಮಕ ಬೆಳವಣಿಗೆ ಆಗಿದೆ ನಾವು ಓದುವಾಗ ಒಟ್ಟು ಅಂಕಗಳು 600 ಅದಕ್ಕೆ 210 ಬಂದರೆ ನಾವು ಉತ್ತೀರ್ಣರಾಗುತ್ತಿದ್ದೆವು. ಹಾಗೆಯೇ 600ಕ್ಕೆ 470–480 ಬಂದರೆ ಬಹುದೊಡ್ಡ ಸಾಧನೆ ಮಾಡಿದಂತೆ. ಆದರೆ ಈಗ ಕಾಲ ಬದಲಾಗಿದೆ. 90 ಶತಮಾನದಿಂದ ಮೇಲೆ ಅಂಕ ಗಳಿಸಿದರಷ್ಟೇ ಅದು ಸಾಧನೆ ಎನ್ನುವ ಹಾಗೆ ಬಿಂಬಿಸುತ್ತಾರೆ.

ಇನ್ನು ಅನುತ್ತೀರ್ಣರಾದ ಮಕ್ಕಳ ಪಾಡಂತು ತುಂಬಾ ಕಷ್ಟ. ಏಕೆ ಹೀಗೆ? ಪೋಷಕರು, ಮಕ್ಕಳು ಶಾಲೆ ಕಲಿಯುವುದು ತಮ್ಮ ತಿಳುವಳಿಕೆಗಾಗಿ, ಬುದ್ಧಿವಂತಕೆಗಾಗಿ ಅದೇ ಕೊನೆ ಅಲ್ಲ ಅನುತ್ತೀರ್ಣರಾದ ಮಕ್ಕಳ ಪೋಷಕರು ತಮ್ಮ ಮಕ್ಕಳನ್ನು ಇತರರಿಗೆ ಹೋಲಿಸದೆ ತಾವು ಸಹ ಓದುವಾಗ ಹೇಗಿದ್ದೆವು ಅನ್ನುವುದನ್ನು ತಮ್ಮ ಮನದಲ್ಲಿ ಇಟ್ಟುಕೊಂಡು ಮಕ್ಕಳಿಗೆ ನಿರಾಶೆಯಾಗದಂತೆ ಮುಂದಿನ ಬೆಳಕಿನ ಕಡೆ ಭರವಸೆಯನ್ನು ಮೂಡಿಸುವಂತಿ–ರಬೇಕು. ಅದನ್ನು ಬಿಟ್ಟು ಮಕ್ಕಳ ಮನಸ್ಸನ್ನು ಧ್ವಂಸಗೊಳಿಸುವಂತಿ–ರಬಾರದು.

ಯಾವುದೇ ಮಕ್ಕಳು ಅವರ ಪ್ರಗತಿಯನ್ನು ಅಳೆಯಲು ಮಾತ್ರ ಪರೀಕ್ಷೆಯಲ್ಲಿ ಕಾಣಿಸುತ್ತಾರೆಯೇ ಹೊರತು ಅವರ ಸ್ನೇಹಿತರಿಗೆ ಪ್ರತಿಸ್ಪರ್ಧಿಗಳಾಗಿ ಅವರನ್ನು ಮೀ–ರಿಸಬೇಕು ಎನ್ನುವದು ಅವಿವೇಕಿತನ, ಇದನ್ನು ಅರಿತು ಪೋಷಕರಾದವರು ಮಕ್ಕಳಿಗೆ ಮಾಡಬೇಕಾದ ಕೆಲವು ಕೆಲಸಗಳೆಂದರೆ,

1. ಮಕ್ಕಳ ಜೊತೆಗೆ ಮುಕ್ತ ಸಂವಾದ ನಡೆಸಿ.

ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಮಕ್ಕಳ ಜೊತೆ ಅವರವರ ತಂದೆ–ತಾಯಿ ಜೊತೆಗೂಡಿ ಮುಕ್ತವಾಗಿ ಕುಳಿತು ಸಂವಾದ ಮಾಡಬೇಕು. ಏಕೆಂದರೆ ಅನುತ್ತೀರ್ಣರಾದ ಮಕ್ಕಳಿಗೆ ತಂದೆ–ತಾಯಿಯ ಜೊತೆ ಈ ವಿಷಯ ಮಾತಾಡಲು ಕಷ್ಟವಾಗುತ್ತದೆ, ಮಕ್ಕಳು ಅನುತ್ತೀರ್ಣರಾದ್ದಕ್ಕೆ ನಾಚಿಕೆಪಡುತ್ತಾರೆ. ಅದರಲ್ಲಿಯೂ ತಾಯಿಗಿಂತ ತಂದೆಯವರ ಜೊತೆ ನಾಚಿಕೆಗಿಂತ ಭಯ ಪಡುವುದೇ ಜಾಸ್ತಿ ಆದ್ದರಿಂದ ನಿಮ್ಮ ಮಕ್ಕಳ ಜೊತೆ ಮುಕ್ತವಾಗಿ ಮಾತಾಡಿ ಮಕ್ಕಳಲ್ಲಿ ಆತ್ಮವಿಶ್ವಾಸ ತುಂಬಿ ಚಿಂತೆ ಮಾಡಬೇಡ ಮಗ ಮತ್ತೆ ಪ್ರಯತ್ನ ಮಾಡು ಇದು ನಿನ್ನ ಕೈಯಿಂದ ಖಂಡಿತ ಸಾದ್ಯವಾಗುತ್ತದೆ ಎಂದು ಆತನ ಆತ್ಮಸ್ಥೈರ್ಯ ಬಲಪಡಿಸಬೇಕು. ಅದನ್ನು ಬಿಟ್ಟು ಇತರರಿಗೆ ಅವರ ಸ್ನೇಹಿತರಿಗೆ ಹೋಲಿಸಿ ಅವಮಾನ ಮಾಡದಿರಿ.


2. ನಿಮ್ಮ ಬೆಂಬಲದೊಂದಿಗೆ ಧೈರ್ಯ ನೀಡಿ

ಪ್ರತಿ ಮಕ್ಕಳು ಅದರಲ್ಲಿಯೂ ಅನುತ್ತೀರ್ಣರಾದ ವಿಶೇಷವಾಗಿ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಹುಡುಗರು ಅನುತ್ತೀರ್ಣತೆ ಯನ್ನು ನೀರೀಕ್ಷೆ ಮಾಡದಿದ್ದರೂ ಪ್ರತಿ ಮಕ್ಕಳು ತನ್ನ ಪೋಷಕರ ಬೆಂಬಲವನ್ನು ನೀರೀಕ್ಷಿಸಿರುತ್ತಾರೆ. ಆಗ ನಿಮ್ಮ ನಿರ್ಧಾರ ಏನು? ಎನ್ನುವುದು ಮಕ್ಕಳಿಗೆ ಗೊತ್ತಾಗುತ್ತದೆ ಆಗ ನೀವು ಅವರ ವೈಫಲ್ಯವನ್ನು ಮರೆತು ಮಕ್ಕಳನ್ನು ಹುರಿದುಂಬಿಸಬೇಕು.

ಮತ್ತೆ ಮತ್ತೆ ಪ್ರಯತ್ನಸುವಂತೆ ಮಾಡಬೇಕು ಹೊರತು ಅವರ ನ್ಯೂನತೆಗಳನ್ನುಹುಡುಕಬಾರದು ನೀವು ನಿಮ್ಮ ಮಕ್ಕಳನ್ನು ಬೇರೆಯವರ ಎದುರು ಎಂದೂ ಬಿಟ್ಟುಕೊಡ ಬಾರದು.

3.ನಿಮ್ಮ ಮಕ್ಕಳು ಖಿನ್ನತೆಗೆ ಒಳಗಾಗದಂತೆ ತಡೆಯಿರಿ.

ಮಕ್ಕಳು ಯಾವತ್ತು ಮನೆಯ ಪೋಷಕರನ್ನು ಸಂತೋಷಪಡಿಸಲು ಪ್ರಯತ್ನ ಮಾಡುತ್ತಿರುತ್ತಾರೆ. ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡು ಪೋಷಕರನ್ನು ನಿರಾಶೆಗೊಳಿಸುವುದು ಅವರ ಉದ್ದೇಶ ಇರುವುದಿಲ್ಲ. ಆದರೆ ಅನುತ್ತೀರ್ಣರಾದ ತಕ್ಷಣ ಅವರಲ್ಲಿ ಆತ್ಮವಿಶ್ವಾಸ ಕಳೆದು ಅಪರಾಧ ಭಾವನೆ ತುಂಬುತ್ತದೆ. ಆಗ ಪೋಷಕರು ಅವರ ವೈಫಲ್ಯಕ್ಕೆ ಅತಿಯಾಗಿ ಪ್ರತಿಕ್ರಿಯಿಸುವುದು ಅವರನ್ನು ಖಿನ್ನತೆಗೆ ತಳ್ಳಿದಂತೆ ಆಗುತ್ತದೆ. ಆದ್ದರಿಂದ ಅನುತ್ತೀರ್ಣರಾದ ಮಕಳಿಗೆ ಎಲ್ಲವೂ ಕಳೆದು ಹೋಗಿಲ್ಲ ಮತ್ತೆ ಸಮಯವಿದೆ ಇನ್ನು ಉತ್ತಮವಾದ ಅಂಕ ತೆಗೆಯಲು ಈ ರೀತಿ ಆಗಿದೆ, ಇದು ನಿನ್ನ ಅದೃಷ್ಟ ಅಂತ ಪ್ರೇರಣೆ ತುಂಬಿ ಖುಷಿಪಡಿಸಬೇಕು. ಆಗ ಮಕ್ಕಳು ಇನ್ನು ಹೆಚ್ಚಿಗೆ ಅಂಕ ತೆಗೆಯಲು ಅನುವು ಮಾಡಿಕೊಟ್ಟಂತೆ ಆಗುತ್ತದೆ.



4.ಮಕ್ಕಳ ಮುಂದಿನ ಭವಿಷ್ಯ ರೂಪಿಸಿ.

ನಿಮ್ಮ ಮಕ್ಕಳು ಅನುತ್ತೀರ್ಣರಾಗಲು ಅದರ ಹಿಂದಿನ ಅನೇಕ ಕಾರಣಗಳನ್ನು ಹುಡುಕಿ ಅವುಗಳನ್ನು ತಿಳಿದುಕೊಳ್ಳಿ. ಅವರ ಹಿಂದಿನ ನ್ಯೂನತೆಗಳನ್ನು ತಿಳಿದು ಅವುಗಳನ್ನು ಮಕ್ಕಳಿಗೆ ತಿದ್ದಿ ನಗು ನಗುತ್ತಾ ಹೇಳಿ. ಜೊತೆಗೆ ಮುಂದಿನ ಭವಿಷ್ಯದ ಕ್ರಮಗಳನ್ನು ರೂಪಿಸಲು ಅವರೊಂದಿಗೆ ಕುಳಿತು ಮಾತನಾಡಿ ನೀವು ತಿಳುವಳಿಕೆ ಇಲ್ಲದವರಾದರೆ ಮಕ್ಕಳ ಶಿಕ್ಷಕರ ಸಹಾಯವನ್ನು ತೆಗೆದುಕೊಳ್ಳಿ ಏಕೆಂದರೆ ಇಂತಹ ಸಂದರ್ಭದಲ್ಲಿ ಮಕ್ಕಳಿಗೆ ಪೋಷಕರ ಬೆಂಬಲ ತುಂಬಾ ಮುಖ್ಯ.

5.ಮಕ್ಕಳನ್ನು ಇತರೊಂದಿಗೆ ಹೋಲಿಸಬೇಡಿ.


ನಮ್ಮ ಸಮಾಜದಲ್ಲಿ ಪ್ರತಿಯೊಬ್ಬ ಪೋಷಕರು ಮಾಡುವ ಮೊದಲ ದೊಡ್ಡ ತಪ್ಪು ಇದೇ.ಮಕ್ಕಳು ಅನುತ್ತೀರ್ಣರಾದ ತಕ್ಷಣ ಮನೆಯ ಸುತ್ತಮುತ್ತ ಇರುವವನ್ನು ಅಥವಾ ಗೆಳೆಯರು, ಅಥವಾ ಸಂಭಂದಿಕರ ಹೆಸರು ಹೇಳಿ ಅವರಿಗೆ ಹೋಲಿಸಿ ಬೈಯುವುದು ಸಾಮಾನ್ಯ. ಖಂಡಿತ ಆ ಕೆಲಸ ಮಾಡಬೇಡಿ ಆಗ ಮಗುವಿಗೆ ಅವಮಾನ ಆಗುತ್ತದೆ ಮಕ್ಕಳಿಗೆ ಪ್ರತ್ಯೇಕತೆಯ ಕೋಪ ಉಂಟಾಗುತ್ತದೆ. ಮುಂದಿನ ದೀರ್ಘಾವದಿಯಲ್ಲಿ ಇದು ಅಸಡ್ಡೆ ಆಗಿ ಬದಲಾಗ ಬಹುದು. ಆದ್ದರಿಂದ ಮುಂದಿನ ಜೀವನದಲ್ಲಿ ಎದುರಾಗಬಹುದಾದ ಸವಾಲುಗಳನ್ನು ಎದುರಿಸಲು ಮಕ್ಕಳನ್ನು ಆತ್ಮಸಾಕ್ಷಿಯಾಗಿ ಸಿದ್ದಗೊಳಿಸಿ. ಅಂಕಗಳು ಮುಖ್ಯ ಅಲ್ಲ ಮಕ್ಕಳನ್ನು ಸಮಗ್ರ ಬೆಳವಣಿಗೆಗೆ, ಜೀವನದ ಕಲಿಕೆಗೆ ಪ್ರೋತ್ಸಾಹಿಸಿ.

6.ಮಕ್ಕಳ ಶಿಕ್ಷಕರನ್ನು ಆಗಾಗ ಬೆಟ್ಟಿಯಾಗುತ್ತಿರಿ.

ಪರೀಕ್ಷೆಗೆ ಮೊದಲು ಆಗಾಗ ಶಾಲೆಗೆ ಹೋಗಿ ಶಿಕ್ಷಕರನ್ನು ಕಂಡು ಮಕ್ಕಳ ಬಗ್ಗೆ ವಿಚಾರಿಸುತ್ತಿರಬೇಕು. ಆಗ ಮಕ್ಕಳ ಕಲಿಕೆಯ ಮಟ್ಟ ತಿಳಿಯುತ್ತದೆ.ಅದನ್ನು ಪರೀಕ್ಷೆ ಬರುವ ಮುಂಚಿತವಾಗಿ ಸರಿ ಮಾಡಬೇಕು. ಏಕೆಂದರೆ ಶಾಲೆಯಲ್ಲಿ ಕೆಲ ಶಿಕ್ಷಕರು ಬುದ್ಧಿವಂತ ಮಕ್ಕಳನ್ನು ಮಾತ್ರ ಮುಂದಿನ ಬೆಂಚಿನಲ್ಲಿ ಕೂಡಿಸಿಕೊಂಡು ಪಾಠ ಮಾಡಿ ಅವ–ರಿಗೆ ಹೆಚ್ಚು ಹೆಚ್ಚು ಅಂಕ ಬರಲು ಪ್ರಯತ್ನಿಸುತ್ತಾರೆ. ಇದು ಅಪ್ಪಟ ಅಪರಾಧ.

7. ನೂರು ಶತಮಾನ ಫಲಿತಾಂಶಕ್ಕಾಗಿ ಹೋರಾಟ

ಇತ್ತೀಚಿಗೆ ಕೆಲ ಖಾಸಗಿ ಶಾಲೆಗಳು ತಮ್ಮ ಶಾಲೆಯ ಘನತೆ, ಗೌರವ, ಪ್ರತಿಷ್ಠೆ ಜಾಸ್ತಿಯಾಗಲು ನೂರು ಶತಮಾನ ಫಲಿತಾಂಶಕ್ಕಾಗಿ ಹೋರಾಟ ಮಾಡುತ್ತಿರುತ್ತವೆ. ಇಂತಹ ಸಂದರ್ಭದಲ್ಲಿ ಅತೀ ಬುದ್ದಿವಂತ ಮಕ್ಕಳನ್ನು ಶಾಲೆಗೆ ಸೇರಿಸಿಕೊಂಡು ತಮ್ಮ ಜವಾಬ್ದಾ–ರಿಯನ್ನು ಕಡಿಮೆ ಮಾಡುತ್ತಿರುತ್ತವೆ .ಬುದ್ದಿವಂತ ಮಕ್ಕಳನ್ನು ಮತ್ತಷ್ಟು ಬುದ್ದಿವಂತರನ್ನಾಗಿ ಮಾಡುವುದು ಮುಖ್ಯವಲ್ಲ. ದಡ್ಡ ಮಕ್ಕಳನ್ನು ಬುದ್ದಿವಂತರನ್ನಾಗಿ ಮಾಡುವುದು ತಮ್ಮ ಕರ್ತವ್ಯ ಅಂತ ತಿಳಿಯುವುದೇ ಇಲ್ಲ ಕೇವಲ ತಮ್ಮ ಶಾಲೆಯ ನೂರು ಶತಮಾನ ಫಲಿತಾಂಶ ಬರಬೇಕು ಅಂತ ಹೊರಾಡುತ್ತಿರುತ್ತವೆ. ಅಂತಹ ಶಿಕ್ಷಕರಿಗೆ ಪೋಷಕರೇ ಬುದ್ದಿ ಹೇಳಿ ಸರಿಪಡಿಸಬೇಕು.



ನನ್ನ ವಿಚಾರದಲ್ಲಿ ಅನುತ್ತೀರ್ಣರಾದ ಹಾಗು ಕಡಿಮೆ ಅಂಕ ಗಳಿಸಿದವರಿಗೆ ಒಂದು ಕಿವಿ ಮಾತು...

ಮನಷ್ಯನ ಹುಟ್ಟಿನಿಂದಲೇ ಎಲ್ಲಾ ಕಲಿತು ಬಂದಿರುವುದಿಲ್ಲ ಎಲ್ಲರೂ ಹುಟ್ಟಿದ ನಂತರವೇ ಕಲಿಯುವುದು ಅವರವರ ಮನೆಯ ಪರಿಸ್ಥಿತಿಗೆ ಅನುಗುಣವಾಗಿ ಅವರ ಓದು ಮುಖ್ಯವಾಗಿರುತ್ತದೆ ಎನ್ನುವುದು ನನ್ನ ಭಾವನೆ ಹಾಗಂತ ಕಡಿಮೆ ಅಂಕ ಗಳಿಸಿದವರು ಯಾವುದಕ್ಕೂ ಬರದವರು ಅಂತ ಅಲ್ಲ ನನ್ನ ಪ್ರಕಾರ ಓದು ಕಲಿಯುವುದು ನಮ್ಮ ಪ್ರಪಂಚ ಜ್ಞಾನಕ್ಕಾಗಿ ಅದನ್ನು ಎಷ್ಟು ಕಲಿತಿದ್ದೇವೆ ಎನ್ನುವುದೇ ತೂಕ ಮಾಡಿಕೊಂಡಂತೆ ಈ ಪರೀಕ್ಷೆ, ಉತ್ತಿರ್ಣ ಮತ್ತು ಅನುತ್ತೀರ್ಣ ಶಾಲೆಯ ಪರಿ ಪಾಠಗಳನ್ನು ಕಲಿತು ಉತ್ತಿರ್ಣರಾಗಿ ಕೆಲಸವಿಲ್ಲದೆ ಬಡಿದಾಡಿಕೊಳ್ಳುವುದಕ್ಕಿಂತ ಉತ್ತಿರ್ಣನೂ ಅನುತ್ತೀರ್ಣನೂ ಶಾಲೆ ಎಂಬ ಜ್ಞಾನ ಆಲಯದಲ್ಲಿ ಪಾಠ ಕಲಿತು ಸಮಾಜದಲ್ಲಿ ಇರುವ ಸಾಮಾನ್ಯ ಜ್ಞಾನ ಸಂಪಾದಿಸಿ ಎಲ್ಲರೊಂದಿಗೆ ಸಹಬಾಳ್ವೆಯ ಕಲಿತು ಪ್ರಪಂಚ ಜ್ಞಾನ ಸಂಪಾದಿಸಿದರೆ ಖಂಡಿತ ನೀವು ಎಲ್ಲಾ ಕಲಿತು ಉತ್ತಿರ್ಣನಾದವನಿಗಿಂತ ಮೇಲು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR